ಸಂಪುಟ: 11 ಸಂಚಿಕೆ: 212 ಪುಟಗಳು: 4+2 ಬೆಲೆ: ₹ 3.00 ಭಾನುವಾರ, ಸೆಪ್ಟೆಂಬರ್ 27, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 212 Pages : 4+2 Rate : 3.00 Sunday, September 27, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಇಂದು ವಿಶ್ವ ಪ್ರವಾಸೋದ್ಯಮ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

2026ನೇ ಸಾಲಿನ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮವನ್ನು ಸೆಪ್ಟೆಂಬರ್ 27ರಂದು ಬೆಳಿಗ್ಗೆ 11 ಗಂಟೆಗೆ ನಗರದ ಭೀಷ್ಮ ಕೆರೆ ವಿಹಾರಧಾಮದ ಆವರಣದಲ್ಲಿರುವ ಶ್ರೀ ಬಸವೇಶ್ವರ ಮೂರ್ತಿ ಉದ್ಯಾನವನ ಪ್ರವಾಸಿ ತಾಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲ ಇಲಾಖೆಗಳ ಮುಖ್ಯಸ್ಥರು, ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸುವಂತೆ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಇಂದು ಮೃತ್ಯುಂಜಯ ಅಪ್ಪಗಳವರ ಸ್ಮರಣೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ಮಣಕವಾಡದ ಮಹಿಮಾಪುರುಷ ಶ್ರೀ ಗುರುಮೃತ್ಯುಂಜಯ ಅಪ್ಪಗಳವರ ಸ್ಮರಣೋತ್ಸವ ಮಾಲಿಕೆ ಕಾರ್ಯಕ್ರಮ ಸೆ.27ರಂದು ಬೆಳಗ್ಗೆ 10.30ಕ್ಕೆ ನಗರದ ಮುನ್ಸಿಪಲ್ ಹೈಸ್ಕೂಲ್ ಪಕ್ಕದ (ಸ್ಟೇಷನ್ ರಸ್ತೆ) ಶ್ರೀ ಗುರುಮೃತ್ಯುಂಜಯ ಗುರುಕುಲ ಆಶ್ರಮದ ಸಭಾಭವನದಲ್ಲಿ ಜರುಗಲಿದೆ.

ಹಿರಿಯ ಸಾಹಿತಿ ಐ. ಕೆ. ಕಮ್ಮಾರ ಅಧ್ಯಕ್ಷತೆ ವಹಿಸುವರು. ಹಿರಿಯರಾದ ನಾಗಾವಿಯ ಮೃತ್ಯುಂಜಯ ಹಟ್ಟಿ, ಸಂಭಾಪುರದ ರಾಯಪ್ಪ ನಾಗನೂರ, ಚಿಕ್ಕೋಪದ ಶಿವಣ್ಣ ಒಡೆಯರ, ಹಿರೇಹಂದಿಗೋಳದ ಶಿವಶಂಕ್ರಪ್ಪ ಆರಟ್ಟಿ, ಎಚ್. ಎನ್. ಕುರಿ ಹಾಗೂ ರಾಜಣಸಾ ಕಲಬುರ್ಗಿ ಅತಿಥಿಗಳಾಗಿ ಪಾಲ್ಗೊಳ್ಳುವರು.

ಶಿವಣ್ಣ ಒಡೆಯರ ಭಕ್ತಿ ಸೇವೆ ವಹಿಸಿಕೊಳ್ಳುವರು. ಹಿರಿಯರಾದ ಎಚ್. ಎಂ. ಪಿಂಗಳೆ ಉಪಸ್ಥಿತರಿರುವರು.

ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪೂಜ್ಯರ ಕೃಪೆಗೆ ಪಾತ್ರರಾಗಬೇಕು ಎಂದು ಆಶ್ರಮದ ವಿದ್ಯಾರ್ಥಿಗಳಾದ ಆಲಮ್, ಅಸ್ಲಮ್ ಹಾಗೂ ಅಕ್ರಮ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

## ಸೆ.29ರಂದು ರಡ್ಡಿ ಸಮಾಜದ ಸರ್ವಸಾಧಾರಣ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಶಿವಶರಣೆ ಹೇಮರಡ್ಡಿ ಮಲ್ಲಮ್ಮ-ಶ್ರೀ ಮಹಾಯೋಗಿ ವೇಮನ ಗದಗ ಜಿಲ್ಲಾ ರಡ್ಡಿ ಸಮಾಜ ಸಂಘದ (ರಿ.) ವಾರ್ಷಿಕ ಸರ್ವಸಾಧಾರಣ ಸಭೆ ಸೆ.29ರಂದು ಬೆಳಗ್ಗೆ 11 ಗಂಟೆಗೆ ನಗರದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ (ರಡ್ಡಿ ಕಾಲೇಜು) ಸಭಾಂಗಣದಲ್ಲಿ ನಡೆಯಲಿದೆ.

ಸಭೆಯಲ್ಲಿ ಸಂಘದ ವಿವಿಧ ವಿಷಯಗಳ ಕುರಿತು ಚರ್ಚಿಸಿ, ಸದಸ್ಯರಿಂದ ಸಲಹೆ–ಸೂಚನೆಗಳನ್ನು ಪಡೆಯಲಾಗುವುದು. ಸಂಘದ ಸರ್ವ ಸದಸ್ಯರು ನಿಗದಿತ ಸಮಯಕ್ಕೆ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ಸಂಘದ ಗೌರವ ಕಾರ್ಯದರ್ಶಿ ಶೇಖರಡ್ಡಿ ಫ. ಗದ್ದಿಕೇರಿ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

### ಪಂಚ ಗ್ಯಾರಂಟಿ ಹೆಸರಿನಲ್ಲಿ ಅಧಿಕಾರಕ್ಕೆ ಬಂದು ರೈತ-ಯುವಕರನ್ನು ಕಡೆಗಣಿಸಿದೆ: ಅನಿಲ ಮೆಣಸಿನಕಾಯಿ

# ಕಾಂಗ್ರೆಸ್ ಸರ್ಕಾರದ ಖಜಾನೆ ಖಾಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಆಡಳಿತದ ಎಲ್ಲ ರಂಗಗಳಲ್ಲೂ ವಿಫಲವಾಗಿದೆ. ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಜನರಿಗೆ ಭರವಸೆ ನೀಡಿ ಅಧಿಕಾರಕ್ಕೆ ಬಂದ ಸರ್ಕಾರ, ಬಳಿಕ ರೈತರು ಮತ್ತು ಯುವಕರ ಹಿತವನ್ನು ಕಡೆಗಣಿಸಿದೆ ಎಂದು ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ ಆರೋಪಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತ ಹಾಗೂ ಜಿಲ್ಲೆಗಳಿಗೆ ಅನುದಾನ ಹಂಚಿಕೆ ವಿಚಾರವನ್ನು ಖಂಡಿಸಿ ಬಿಜೆಪಿ ಕಾರ್ಯಕರ್ತರು ಶನಿವಾರ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಖಾಲಿ ಚೊಂಬು, ಚಿಪ್ಪು ಹಿಡಿದು ವಿನೂತನ ಪ್ರತಿಭಟನೆ ನಡೆಸಿದರು.

ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದ ಕಾರ್ಯಕರ್ತರು, ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಸುಳ್ಳು ಭರವಸೆ ನೀಡಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಅಧಿಕಾರಕ್ಕೆ ಬಂದ ಬಳಿಕ ರೈತರಿಗಾಗಿ ಸಮರ್ಪಕ ಯೋಜನೆಗಳನ್ನು ಜಾರಿಗೊಳಿಸಿಲ್ಲ. ಹಲವು ತಿಂಗಳಿಂದ ಗೃಹಲಕ್ಷ್ಮಿ ಹಣ ಜಮೆಯಾಗಿಲ್ಲ. ನಕಲಿ ಖಾತೆಗಳಿಗೆ ಹಣ ಸಂದಾಯವಾಗಿರುವುದು ಸಾಬೀತಾಗಿದೆ.

ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗಳಿಗೆ ನಷ್ಟವಾಗಿರುವ ಬಗ್ಗೆ ಸಾರಿಗೆ ಸಚಿವರೇ ಹೇಳಿಕೆ ನೀಡಿದ್ದಾರೆ. ಯುವಕರಿಗೆ ಉದ್ಯೋಗ ಕಲ್ಪಿಸಿಲ್ಲ. ಕೆಪಿಎಸ್‌ಸಿಯನ್ನೂ ಮುಚ್ಚುವ ಯತ್ನ ನಡೆದಿದೆ ಎಂದು ಅನಿಲ ಮೆಣಸಿನಕಾಯಿ ಆರೋಪಿಸಿದರು.




**₹35 ಸಾವಿರ ಕೋಟಿ ಅನುದಾನದ ಭರವಸೆ ಹುಸಿ ಆರೋಪ**

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, ₹35 ಸಾವಿರ ಕೋಟಿ ಅನುದಾನ ನೀಡುವುದಾಗಿ ಭರವಸೆ ನೀಡಿ ಬಳಿಕ ಜಿಲ್ಲೆಗಳಿಗೆ ಸಮರ್ಪಕ ಅನುದಾನ ಒದಗಿಸಿಲ್ಲ ಎಂದು ಆರೋಪಿಸಿದರು. ಅಂಗೈಯಲ್ಲಿ ಆಕಾಶ ತೋರಿಸಿ ಬಳಿಕ ಖಾಲಿ ಚೊಂಬು ನೀಡಲಾಗಿದೆ. ವಿವಿಧ ಯೋಜನೆಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ಅಗತ್ಯ ಅನುದಾನ ಒದಗಿಸುವಲ್ಲಿ ವಿಳಂಬವಾಗುತ್ತಿದೆ ಎಂದು ದೂರಿದರು.

> ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಆಡಳಿತದ ಎಲ್ಲ ರಂಗಗಳಲ್ಲೂ ವಿಫಲವಾಗಿದೆ. ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಸುಳ್ಳು ಭರವಸೆ ನೀಡಿ ಅಧಿಕಾರಕ್ಕೆ ಬಂದಿದೆ. ರೈತರಿಗೆ ಸಮರ್ಪಕ ಯೋಜನೆಗಳನ್ನು ಜಾರಿಗೊಳಿಸಿಲ್ಲ. ಗೃಹಲಕ್ಷ್ಮಿ ಹಣ ಹಲವು ತಿಂಗಳಿಂದ ಜಮೆಯಾಗಿಲ್ಲ. ಯುವಕರಿಗೆ ಉದ್ಯೋಗ ಕಲ್ಪಿಸಿಲ್ಲ. ಸರ್ಕಾರ ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸಬೇಕು.
>
> – ಅನಿಲ್ ಮೆಣಸಿನಕಾಯಿ, ಬಿಜೆಪಿ ಮುಖಂಡ

ಪ್ರತಿಭಟನಾಕಾರರು 'ಕಾಂಗ್ರೆಸ್ ನಂಬಿದರೆ ಚೊಂಬು ಗ್ಯಾರಂಟಿ', 'ಬೊಕ್ಕಸ ಖಾಲಿ', 'ಕಾಂಗ್ರೆಸ್ ಸರ್ಕಾರದ ಖಜಾನೆ ಖಾಲಿ' ಎಂಬ ಘೋಷಣೆಗಳಿರುವ ನಾಮಫಲಕಗಳನ್ನು ಪ್ರದರ್ಶಿಸಿದರು.

ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಕಾರ್ಯಕರ್ತರು ಮಹಾತ್ಮ ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆ ನಡೆಸಿದರು.

ಜಿಲ್ಲಾ ಬಿಜೆಪಿ ಉಪಾಧ್ಯಕ್ಷರಾದ ಆನಂದಗೌಡ ಪಾಟೀಲ, ಲಿಂಗರಾಜ ಪಾಟೀಲ, ಅರವಿಂದ ಹುಲ್ಲೂರ, ಎಂ.ಎಂ. ಹಿರೇಮಠ, ಶಿವರಾಜ ಹಿರೇಮನಿಪಾಟೀಲ, ವಿಜಯಕುಮಾರ ಗಡ್ಡಿ, ರವಿ ದಂಡಿನ, ಅನಿಲ ಅಬ್ಬಿಗೇರಿ, ಚಂದ್ರು ತಡಸದ, ರಾಘವೇಂದ್ರ ಯಳವತ್ತಿ, ವಸಂತ ಪಡಗದ, ಶಂಕರ ಕಾಕಿ, ಇರ್ಷಾದ್ ಮಾನ್ವಿ, ರಮೇಶ ಸಜ್ಜಗಾರ, ಸಂತೋಷ ಅಕ್ಕಿ, ಮಾಂತೇಶ ಬಾತಾಖಾನಿ, ಅರವಿಂದ ಕೆಲೂರ, ದೇವೇಂದ್ರಪ್ಪ ಹೂಗಾರ, ಎಸ್.ಪಿ. ಚವಡಿ, ಅವಿನಾಶ ಹೊನಗುಡಿ, ಅಪ್ಪಣ್ಣ ಟೆಂಗಿನಕಾಯಿ, ಸಂಜೀವ ಖಟವಟೆ, ಮಂಜುನಾಥ, ವಿನೋದ ವಿವಿಧ ಘಟಕಗಳ ಪದಾಧಿಕಾರಿಗಳು, ಮುಖಂಡರು ಪಾಲ್ಗೊಂಡಿದ್ದರು.

### ವಿದ್ಯಾರ್ಥಿಗಳಲ್ಲಿ ಜ್ಞಾನ, ಸಂಸ್ಕಾರ ಬೆಳೆಸುವ ಶಿಕ್ಷಣ ಅಗತ್ಯ: ಡಾ. ಶಿವಣ್ಣ ಕುರಿ

## ಪಠ್ಯೇತರ ಚಟುವಟಿಕೆಗಳಿಂದ ವ್ಯಕ್ತಿತ್ವ ವಿಕಸನ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಪಠ್ಯ ಶಿಕ್ಷಣದ ಜತೆಗೆ ಪಠ್ಯೇತರ ಚಟುವಟಿಕೆಗಳೂ ಅಗತ್ಯ. ಕೇವಲ ಅಂಕ ಗಳಿಸುವುದಕ್ಕೆ ಸೀಮಿತವಾಗದೆ ಜ್ಞಾನ, ಸಂಸ್ಕಾರ ಹಾಗೂ ಸಮಾಜಮುಖಿ ಚಿಂತನೆ ಬೆಳೆಸಿಕೊಳ್ಳಬೇಕು ಎಂದು ಗದಗ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರಾಂಶುಪಾಲ ಡಾ. ಶಿವಣ್ಣ ಎಂ. ಕುರಿ ಹೇಳಿದರು.

ಪಟ್ಟಣದ ಶ್ರೀ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ನಡೆದ 2026–27ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡಾ, ಎನ್‌ಎಸ್‌ಎಸ್, ರೋವರ್ಸ್–ರೇಂಜರ್ಸ್, ಮಹಿಳಾ ವೇದಿಕೆ ಹಾಗೂ ಯುವ ರೆಡ್‌ಕ್ರಾಸ್ ಸೇರಿದಂತೆ ವಿವಿಧ ಪಠ್ಯೇತರ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕಾಲೇಜು ಜೀವನದಲ್ಲಿ ಸಾಂಸ್ಕೃತಿಕ, ಕ್ರೀಡಾ ಹಾಗೂ ಸಮಾಜಮುಖಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರಿಂದ ಆತ್ಮವಿಶ್ವಾಸ, ನಾಯಕತ್ವ ಗುಣ ಹಾಗೂ ಸಮಾಜದ ಬಗ್ಗೆ ಕಾಳಜಿ ಬೆಳೆಸಿಕೊಳ್ಳಲು ಸಾಧ್ಯ. ವಿದ್ಯಾರ್ಥಿ ಜೀವನದಲ್ಲಿ ರೂಢಿಸಿಕೊಳ್ಳುವ ಉತ್ತಮ ಅಭ್ಯಾಸಗಳೇ ಭವಿಷ್ಯದ ವ್ಯಕ್ತಿತ್ವ ರೂಪಿಸುತ್ತವೆ ಎಂದರು.

ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಎಂ.ಎಸ್. ಧಡೇಸೂರಮಠ ಮಾತನಾಡಿ, ಅಂಕ ಗಳಿಸುವುದಕ್ಕಿಂತ ಜ್ಞಾನ ಸಂಪಾದನೆಗೆ ಆದ್ಯತೆ ನೀಡಿ, ಉತ್ತಮ ಸಾಹಿತ್ಯ ಹಾಗೂ ಜ್ಞಾನವರ್ಧಕ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲೆ ಡಾ. ಕಸ್ತೂರೆವ್ವ ಬಿ. ದಳವಾಯಿ ಮಾತನಾಡಿ, ಕಾಲೇಜಿನಲ್ಲಿ ದೊರೆಯುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಪ್ರತಿಭೆ ಹಾಗೂ ವ್ಯಕ್ತಿತ್ವ ಬೆಳೆಸಿಕೊಳ್ಳಬೇಕು ಎಂದರು. ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತುದಾರ ಮಲ್ಲಪ್ಪ ಹೊಸೂರ ಮಾತನಾಡಿ, ಸ್ಪಷ್ಟ ಗುರಿ, ಛಲ, ಶ್ರದ್ಧೆ ಹಾಗೂ ನಿರಂತರ ಅಧ್ಯಯನ ಯಶಸ್ಸಿಗೆ ಅಗತ್ಯ ಎಂದರು.


> ವಿದ್ಯಾರ್ಥಿಗಳು ಅಂಕ ಗಳಿಸುವುದಕ್ಕಷ್ಟೇ ಸೀಮಿತವಾಗದೆ ಜ್ಞಾನ, ಸಂಸ್ಕಾರ ಹಾಗೂ ಸಮಾಜಮುಖಿ ಚಿಂತನೆ ಬೆಳೆಸಿಕೊಳ್ಳಬೇಕು. ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ಆತ್ಮವಿಶ್ವಾಸ ಹಾಗೂ ನಾಯಕತ್ವ ಗುಣ ವೃದ್ಧಿಯಾಗುತ್ತದೆ.
>
> – ಡಾ. ಶಿವಣ್ಣ ಎಂ. ಕುರಿ, ಪ್ರಾಂಶುಪಾಲರು

ಈ ಸಂದರ್ಭದಲ್ಲಿ ಬಸವರಾಜ ಕಳಕೊಣ್ಣವರ, ಅರುಣ ಕಾಮತ, ಶರಣಪ್ಪ ಕುರಿ, ರೇಣುಕಾ ಧರ್ಮಾಯತ, ಬಸೀರಾಬಾನು ನದಾಫ್, ಜಯಶ್ರೀ ಬಿ. ಮುತಗಾರ, ಎಸ್.ಎಸ್. ಸೂಡಿ, ಅಯ್ಯಪ್ಪ, ಸುನಂದಾ ಮುಂಜಿ, ಅನಿಲಕುಮಾರ, ವಿರೂಪಾಕ್ಷ ಆರ್., ಶಿವಕುಮಾರ ಕುರುಬರ, ಶಶಿಕಲಾ ವಿ.ಎಸ್. ಸೇರಿದಂತೆ ಉಪನ್ಯಾಸಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಎನ್.ಎಸ್. ಹೊನ್ನೂರು ನಿರೂಪಿಸಿದರು.

### ನಾನ್-ಯುಜಿಸಿ ಅತಿಥಿ ಉಪನ್ಯಾಸಕರನ್ನು ಶೈಕ್ಷಣಿಕ ಸಂಯೋಜಕರಾಗಿ ನೇಮಿಸಲು ಆಗ್ರಹ

## ವಾರದೊಳಗೆ ಆಯ್ಕೆ ಇಲ್ಲದಿದ್ದರೆ ಹೋರಾಟ

**ವಿಜಯಸಾಕ್ಷಿ ಸುದ್ದಿ, ಗದಗ**



ಅಕ್ಟೋಬರ್ ಮೊದಲ ವಾರದೊಳಗೆ ನಾನ್–ಯುಜಿಸಿ ಅತಿಥಿ ಉಪನ್ಯಾಸಕರನ್ನು ಶೈಕ್ಷಣಿಕ ಸಂಯೋಜಕರಾಗಿ ಆಯ್ಕೆ ಮಾಡದಿದ್ದರೆ ರಾಜ್ಯಾದ್ಯಂತ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಕಲ್ಮನಿ ಎಚ್ಚರಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, 2026–27ನೇ ಸಾಲಿಗೆ ಶೈಕ್ಷಣಿಕ ಸಂಯೋಜಕರ ನೇಮಕಾತಿಗೆ ಉನ್ನತ ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದ್ದರೂ, ಕಾಲೇಜುಗಳು ಆರಂಭವಾಗಿ ಎರಡು–ಮೂರು ತಿಂಗಳು ಕಳೆದರೂ ಆಯ್ಕೆ ಪ್ರಕ್ರಿಯೆ ಆರಂಭವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

15–20 ವರ್ಷಗಳಿಂದ ಸೇವೆ ಸಲ್ಲಿಸಿರುವ ಹಿರಿಯ ಅತಿಥಿ ಉಪನ್ಯಾಸಕರಿಗೆ ಕಳೆದ ಎರಡು ವರ್ಷಗಳಿಂದ ಕೆಲಸವಿಲ್ಲದೆ ಆರ್ಥಿಕ ಸಂಕಷ್ಟ ಎದುರಾಗಿದೆ. ಇಷ್ಟು ವರ್ಷ ಕಡಿಮೆ ವೇತನದಲ್ಲಿ ಸೇವೆ ಪಡೆದಿರುವ ಹಿರಿಯ ಉಪನ್ಯಾಸಕರ ಬಗ್ಗೆ ಇಲಾಖೆ ನಿರ್ಲಕ್ಷ್ಯ ತೋರುತ್ತಿದೆ ಎಂದು ಆರೋಪಿಸಿದ್ದಾರೆ.

ಸೆಪ್ಟೆಂಬರ್ ಎರಡನೇ ವಾರದೊಳಗೆ ಶೈಕ್ಷಣಿಕ ಸಂಯೋಜಕ ಹುದ್ದೆಗಳಿಗೆ ನಾನ್–ಯುಜಿಸಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡುವುದಾಗಿ ಇಲಾಖೆ ತಿಳಿಸಿತ್ತು. ಆದರೆ ಸೆಪ್ಟೆಂಬರ್ ಮುಗಿಯುತ್ತಾ ಬಂದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಆಯುಕ್ತರು ಕೂಡಲೇ ಆಯ್ಕೆ ಪ್ರಕ್ರಿಯೆಯ ದಿನಾಂಕ ಪ್ರಕಟಿಸಿ, ಅರ್ಹ ಅತಿಥಿ ಉಪನ್ಯಾಸಕರಿಗೆ ಅವಕಾಶ ಕಲ್ಪಿಸಬೇಕು ಎಂದು ಕಲ್ಮನಿ ಆಗ್ರಹಿಸಿದ್ದಾರೆ.

## ವಿಜ್ಞಾನ ಮಾದರಿಗಳಲ್ಲಿ ಗದಗ ವಿದ್ಯಾರ್ಥಿಗಳ ರಾಷ್ಟ್ರಮಟ್ಟದ ಸಾಧನೆ

**ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ಎಸ್.ಎಂ. ಕೃಷ್ಣಾ ನಗರದ ಪಿ.ಎಂ. ಶ್ರೀ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ನಂ.12ರ ಇಬ್ಬರು ವಿದ್ಯಾರ್ಥಿಗಳು ಇನ್ಸ್ಪೈರ್ ಅವಾರ್ಡ್ ಎನ್–ಎಲ್‌ಇಪಿಸಿ ವಿಜ್ಞಾನ ಮಾದರಿ ಪ್ರದರ್ಶನಕ್ಕೆ ರಾಷ್ಟ್ರಮಟ್ಟದಲ್ಲಿ ಆಯ್ಕೆಯಾಗುವ ಮೂಲಕ ಗಮನ ಸೆಳೆದಿದ್ದಾರೆ.

ವಿದ್ಯಾರ್ಥಿಗಳಾದ ದಾವಲಸಾಬ ಮೋದಿನಸಾಬ ಒಂಟಿ ಅವರು ತಯಾರಿಸಿದ 'ಮಿಡ್ ಡೇ ಮೀಲ್ ಸೆಫ್ಟಿ ಚೆಕ್ ಫಾರ್ ಸ್ಕೂಲ್' ಹಾಗೂ ಆಕಾಶ ಅಶೋಕ ಪಾಟೀಲ ಅವರು ತಯಾರಿಸಿದ 'ಸ್ಕೂಲ್ ಝೋನ್ ಅಟೋಮೆಟಿಕ್ ಸ್ಪೀಡ್ ಬ್ರೇಕರ್' ತಾಂತ್ರಿಕ ಮಾದರಿಗಳು ರಾಷ್ಟ್ರಮಟ್ಟದ ಪ್ರದರ್ಶನಕ್ಕೆ ಆಯ್ಕೆಯಾಗಿವೆ.

ನವದೆಹಲಿಯಲ್ಲಿ ಅ.12, 13 ಹಾಗೂ 14ರಂದು ನಡೆಯಲಿರುವ ಇನ್ಸ್ಪೈರ್ ಅವಾರ್ಡ್ ಎನ್–ಎಲ್‌ಇಪಿಸಿ ವಿಜ್ಞಾನ ಮಾದರಿ ಪ್ರದರ್ಶನದಲ್ಲಿ ವಿದ್ಯಾರ್ಥಿಗಳು ತಮ್ಮ ಮಾದರಿಗಳನ್ನು ಪ್ರದರ್ಶಿಸಲಿದ್ದಾರೆ.

ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ ವಿಜ್ಞಾನ ಶಿಕ್ಷಕ ಮಂಜುನಾಥ ಕೆ. ಹುಯಿಲಗೋಳ ಅವರನ್ನು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಕಡೆಮನಿ, ನಗರಸಭೆ ಸದಸ್ಯೆ ಲಕ್ಷ್ಮೀ ಸಿದ್ಧಮ್ಮನಹಳ್ಳಿ, ಯುವ ಧುರೀಣರಾದ ಅನಿಲಕುಮಾರ ಸಿದ್ಧಮ್ಮನಹಳ್ಳಿ, ವಸಂತ ಸಿದ್ಧಮ್ಮನಹಳ್ಳಿ, ಫಾರೂಕ ಬಾರಿಗಿಡದ ಹಾಗೂ ಎಲ್.ಎಫ್. ಮುಲ್ಲಾನವರ, ದುದ್ದುಗೌಡ ಪಾಟೀಲ, ಹೊಳಬಸಪ್ಪ ಅಕ್ಕಿ ಅಭಿನಂದಿಸಿದ್ದಾರೆ.

ಶಾಲೆಯ ಮುಖ್ಯೋಪಾಧ್ಯಾಯ ಕೆ.ಡಿ. ತಳವಾರ, ಪ್ರೌಢಶಾಲೆ ಮುಖ್ಯೋಪಾಧ್ಯಾಯ ಎಸ್.ಸಿ. ನಾಗರಹಳ್ಳಿ, ಶಿಕ್ಷಕರಾದ ಎಚ್. ಆರ್. ಕೋಣಿಮನಿ ಸೇರಿದಂತೆ ಎರಡೂ ಶಾಲೆಗಳ ಶಿಕ್ಷಕ–ಶಿಕ್ಷಕಿಂಯರು, ಎಸ್‌ಡಿಎಂಸಿ ಸದಸ್ಯರು ಹಾಗೂ ಸಿಬ್ಬಂದಿ ವಿದ್ಯಾರ್ಥಿಗಳ ಸಾಧನೆಯನ್ನು ಅಭಿನಂದಿಸಿ ಶುಭ ಹಾರೈಸಿದ್ದಾರೆ.

### ಸುಪ್ರೀಂ ಕೋರ್ಟ್ ಆದೇಶಕ್ಕೆ ಬಲ; ನಿಷ್ಪಕ್ಷಪಾತ ತನಿಖೆಗೆ ಸರ್ಕಾರ ಬದ್ಧವಾಗಲಿ

# ಸೌಜನ್ಯ ಪ್ರಕರಣ ಮರುತನಿಖೆಗೆ ಎಸ್‌ಐಟಿ ರಚಿಸಿ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಧರ್ಮಸ್ಥಳದ ಸೌಜನ್ಯ ಪ್ರಕರಣ ಹಾಗೂ ಇತರ ಅಸಹಜ ಸಾವುಗಳ ಕುರಿತು ಕಳೆದ 14 ವರ್ಷಗಳಿಂದ ನ್ಯಾಯಕ್ಕಾಗಿ ಕೇಳಿಬರುತ್ತಿರುವ ಧ್ವನಿಗಳಿಗೆ ಸುಪ್ರೀಂ ಕೋರ್ಟ್ ಆದೇಶ ಬಲ ತುಂಬಿದೆ. ಪ್ರಕರಣದ ಮರುತನಿಖೆಗೆ ದಕ್ಷ ಹಾಗೂ ನಿಷ್ಪಕ್ಷಪಾತ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಬೇಕು ಎಂದು ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯ ತಾಲೂಕು ಘಟಕದ ಪ್ರಧಾನ ಕಾರ್ಯದರ್ಶಿ ಸರ್ದಾರ್ ಹುಲಿಗೆಮ್ಮ ಆಗ್ರಹಿಸಿದರು. ಪಟ್ಟಣದ ಬಸವೇಶ್ವರ ವೃತ್ತದಲ್ಲಿ ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಪದ್ಮಲತಾ ಪ್ರಕರಣದ ಕಾಲದಿಂದಲೂ ನ್ಯಾಯಕ್ಕಾಗಿ ಸಂಘಟನೆ ಹೋರಾಟ ನಡೆಸುತ್ತಾ ಬಂದಿದೆ. ಸುಪ್ರೀಂ ಕೋರ್ಟ್‌ನ ಆದೇಶ ವನ್ನು ಸಂಘಟನೆ ಗೌರವದಿಂದ ಸ್ವಾಗತಿಸುತ್ತದೆ. ಯಾವುದೇ ಮರ್ಜಿ, ಮುಲಾಜಿಗೆ ಒಳಗಾಗದೆ ನಿಷ್ಪಕ್ಷಪಾತ ಹಾಗೂ ನ್ಯಾಯಪರ ತನಿಖೆ ನಡೆಸಲು ಸರ್ಕಾರ ಬದ್ಧವಾಗಬೇಕು ಎಂದು ಒತ್ತಾಯಿಸಿದರು.

ಸೌಜನ್ಯ ಪ್ರಕರಣದ ತನಿಖೆಯಲ್ಲಿ ಈವರೆಗೆ ನಡೆದಿರುವ ಬೆಳವಣಿಗೆಗಳ ಕುರಿತು ಪ್ರಶ್ನೆಗಳನ್ನು ಎತ್ತಿದ ಅವರು, ಹಿಂದಿನ ತನಿಖಾ ಸಂಸ್ಥೆಗಳು ನ್ಯಾಯ ದೊರಕಿಸುವಲ್ಲಿ ವಿಫಲವಾಗಿವೆ ಎಂದು ಆರೋಪಿಸಿದರು. ಹಿಂದಿನ ತನಿಖಾ ತಂಡದಲ್ಲಿದ್ದ ಯಾರನ್ನೂ ಮರುತನಿಖೆಯಲ್ಲಿ ಸೇರ್ಪಡೆಗೊಳಿಸದೆ, ದಕ್ಷ ಹಾಗೂ ತಾಂತ್ರಿಕ ಪರಿಣತಿ ಹೊಂದಿರುವ ಅಧಿಕಾರಿಗಳ ತಂಡವನ್ನು ರಚಿಸಬೇಕು ಎಂದು ಮನವಿ ಮಾಡಿದರು. ಸುಪ್ರೀಂ ಕೋರ್ಟ್ ಹಿಂದಿನ ತಪ್ಪುಗಳನ್ನು ಗಮನದಲ್ಲಿಟ್ಟುಕೊಂಡು ತನಿಖೆಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ವರದಿ ಸಲ್ಲಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ, ಸರ್ಕಾರ ಈ ಅವಕಾಶವನ್ನು ಗಂಭೀರವಾಗಿ ಪರಿಗಣಿಸಿ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಹುಲಿಗೆಮ್ಮ ಹೇಳಿದರು.




ಈ ಸಂದರ್ಭದಲ್ಲಿ ಸಂಘಟನೆಯ ಸಹ ಕಾರ್ಯದರ್ಶಿ ಕಾಳಿ ಅಂಬಿಕಾ, ಖಜಾಂಜಿ ಸಾಹಿರಾಬಾನು, ಮುಖಂಡರಾದ ಲಕ್ಷ್ಮಿ, ಹುಲಿಗೆಮ್ಮ, ರೇಖಾ, ಗೋಣೆಮ್ಮ, ಹನುಮಂತಮ್ಮ, ಕೊಡ್ಲಿ ಹನುಮಮ್ಮ, ಬೇಬವ್ವ, ಸರ್ಕಾರಿ ನೌಕರರ ಒಕ್ಕೂಟದ ಮುಖಂಡ ರಂಗನಾಥ್ ಹವಾಲ್ದಾರ್, ಕೊಟಗೆ ಮಲ್ಲಿಕಾರ್ಜುನ್, ವೀರನಗೌಡ, ಸಾಮಾಜಿಕ ಹೋರಾಟಗಾರ ಭರತ್ ಕುಮಾರ್, ಗಣೇಶ್ ಬೋವಿ, ಆಕಾಶ್ ಸೇರಿದಂತೆ ಹಲವರು ಭಾಗವಹಿಸಿ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು.

> ಸೌಜನ್ಯ ಪ್ರಕರಣದಲ್ಲಿ ನಿಷ್ಪಕ್ಷಪಾತ ತನಿಖೆ ನಡೆಯಬೇಕು. ಯಾವುದೇ ಮರ್ಜಿ, ಮುಲಾಜಿಗೆ ಒಳಗಾಗದೆ ದಕ್ಷ ತನಿಖಾ ತಂಡ ರಚಿಸಿ ಸತ್ಯವನ್ನು ಹೊರತರಬೇಕು.
>
> – ಸರ್ದಾರ್ ಹುಲಿಗೆಮ್ಮ, ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ

### ಗುಣಮಟ್ಟದ ಬೀಜದಿಂದ ಉತ್ತಮ ಇಳುವರಿ: ಡಾ.ಹಂಚಿನಾಳ

# ಬೀಜ ಉಳಿದರೆ ಕೃಷಿ ಉಳಿಯುತ್ತದೆ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ತಲೆತಲಾಂತರದಿಂದ ರೈತರು ಸಂರಕ್ಷಿಸಿಕೊಂಡು ಬಂದಿರುವ ಹಳೆಯ ತಳಿಯ ಬೀಜಗಳನ್ನು ಉಳಿಸಿ, ಮುಂದಿನ ಪೀಳಿಗೆಗೆ ಕೊಂಡೊಯ್ಯುವುದು ಅತ್ಯಗತ್ಯ. ಕೃಷಿಯ ವೈವಿಧ್ಯತೆ ಹಾಗೂ ಭವಿಷ್ಯದ ಆಹಾರ ಭದ್ರತೆಗಾಗಿ ಸಾಂಪ್ರದಾಯಿಕ ತಳಿಗಳ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕೃಷಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ.ಆರ್.ಆರ್. ಹಂಚಿನಾಳ ಹೇಳಿದರು.

ಕೃಷಿ ವಿಶ್ವವಿದ್ಯಾಲಯದ ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಕೃಷಿ ಮೇಳ–2026ರ ಅಂಗವಾಗಿ ಆಯೋಜಿಸಿದ್ದ ಬೀಜ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಳೆಯ ತಳಿಗಳು ಭೂಮಿಯ ಲವಣಾಂಶವನ್ನು ಹೀರಿಕೊಂಡು ಬೆಳೆಯುವ ಸಾಮರ್ಥ್ಯ ಹೊಂದಿವೆ. ಹಿಂದಿನ ಕಾಲದಲ್ಲಿ ರಾಸಾಯನಿಕ ಗೊಬ್ಬರಗಳ ಬಳಕೆ ಇಲ್ಲದಿದ್ದರೂ ರೈತರು ಇಂತಹ ತಳಿಗಳ ಮೂಲಕ ಬೆಳೆ ಬೆಳೆಯುತ್ತಿದ್ದರು. ದೇಶದಲ್ಲಿ ಸುಮಾರು ಎರಡು ಲಕ್ಷಕ್ಕೂ ಅಧಿಕ ಭತ್ತದ ತಳಿಗಳಿದ್ದು, ಬೀಜದ ಮಹತ್ವವನ್ನು ರೈತ–ರಿಗೆ ತಿಳಿಸಿಕೊಡುವುದು ಬಹಳ ಮುಖ್ಯವಾಗಿದೆ ಎಂದರು.

ಉತ್ತಮ ಫಲವತ್ತಾದ ಭೂಮಿಯಲ್ಲಿ ಗುಣಮಟ್ಟದ ಬೀಜ ಬಿತ್ತಿದರೆ ಉತ್ತಮ ಇಳುವರಿ ಪಡೆಯಬಹುದು. ಹಳೆಯ ತಳಿಯ ಬೀಜಗಳನ್ನು ಬಿತ್ತುವುದ–ರಿಂದ ಶೇ.18ರಿಂದ 20ರಷ್ಟು ಹೆಚ್ಚಿನ ಇಳುವರಿ ಪಡೆಯುವ ಸಾಧ್ಯತೆಯಿದೆ. ರಸಗೊಬ್ಬರ ಹಾಗೂ ಕೊಟ್ಟಿಗೆ ಗೊಬ್ಬರವನ್ನು ಸೂಕ್ತವಾಗಿ ಬಳಸಿದರೆ ಇಳುವರಿ ಮತ್ತಷ್ಟು ಹೆಚ್ಚಿಸಬಹುದು ಎಂದು ತಿಳಿಸಿದರು.

ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಎನ್.ಬಿ. ಪ್ರಕಾಶ ಮಾತನಾಡಿ, ಗುಣಮಟ್ಟದ ಬೀಜದಿಂದ ಮಾತ್ರ ಉತ್ತಮ ಇಳುವರಿ ಪಡೆಯಲು ಸಾಧ್ಯ. ಆರೋಗ್ಯ ಕಾಪಾಡಿಕೊಳ್ಳಲು ಉತ್ತಮ ಆಹಾರ ಅಗತ್ಯವಾಗಿದ್ದು, ಅದಕ್ಕಾಗಿ ಗುಣಮಟ್ಟದ ಕೃಷಿ ಉತ್ಪನ್ನಗಳ ಉತ್ಪಾದನೆಗೆ ಒತ್ತು ನೀಡಬೇಕು ಎಂದರು. ಕೃಷಿ ವಿಶ್ವವಿದ್ಯಾಲಯದ ಬೀಜ ಘಟಕ ಸ್ಥಾಪನೆಯಾಗಿ 25 ವರ್ಷಗಳಾಗಿವೆ. ರೈತರ ಸಹಭಾಗಿ–ತ್ವದಲ್ಲಿ ಬೀಜ ಉತ್ಪಾದನೆಗೆ ಒತ್ತು ನೀಡಲಾಗುತ್ತಿದೆ. ಬೀಜ ಘಟಕವು ಐಸಿಎಆರ್‌ನಿಂದ 2013 ಹಾಗೂ 2020ರಲ್ಲಿ ಪ್ರಶಸ್ತಿ ಪಡೆದಿದೆ. ಹಿಂದಿನ ಕಾಲದ ಬೀಜಗಳನ್ನು ಸಂರಕ್ಷಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು.

ಕೃಷಿ ಮೇಳದಲ್ಲಿ ಇದೇ ಮೊದಲ ಬಾರಿಗೆ ಬೀಜ ಮೇಳ ಆಯೋಜಿಸಲಾಗಿದೆ. ಶೇಂಗಾ ಬೆಳೆಯ ತಳಿಗೂ ಅಂತರರಾಷ್ಟ್ರೀಯ ಪ್ರಶಸ್ತಿ ದೊರೆತಿದೆ ಎಂದರು.

ಇದೇ ಸಂದರ್ಭದಲ್ಲಿ 2026ನೇ ಸಾಲಿನ ಶ್ರೇಷ್ಠ ಬೀಜೋತ್ಪಾದಕರಾದ ಶೋಭಾ ಕಾಲವಾಡ, ನಿರ್ಮಲಾ ನಾಗನೂರ ಹಾಗೂ ಶಿವನಗೌಡ ಬಾಳನಗೌಡರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ವೀರನಗೌಡ ಪೊಲೀಸಗೌಡರ, ಪಾರ್ವತಿ ಕುರ್ಲೆ, ರವಿಕುಮಾರ ಮಾಳಿಗೇರ, ಬಸವರಾಜ ಕುಂದಗೋಳಮಠ, ಮಾಲತೇಶ ಶ್ಯಾಗೋಟಿ, ಜಯಶ್ರೀ ಶಿಂತ್ರಿ, ಶಿಕ್ಷಣ ನಿರ್ದೇಶಕ ಡಾ.ಎಂ.ವಿ. ಮಂಜುನಾಥ, ವಿಸ್ತರಣಾ ನಿರ್ದೇಶಕಿ ಡಾ.ಮಂಜುಳಾ ಎನ್. ಸೇರಿದಂತೆ ವಿಶ್ವವಿದ್ಯಾಲಯದ ಅಧಿಕಾರಿಗಳು, ಪ್ರಾಧ್ಯಾಪಕರು, ವಿದ್ಯಾರ್ಥಿಗಳು, ರೈತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸೌಜನ್ಯ ಹಿರೇಮಠ ಪ್ರಾರ್ಥಿಸಿದರು. ಸಂಶೋಧನಾ ನಿರ್ದೇಶಕ ಡಾ. ಎ.ಎಸ್. ಸಜ್ಜನ ಸ್ವಾಗತಿಸಿದರು. ಪ್ರಾಧ್ಯಾಪಕಿ ಡಾ.ಸುರೇಖಾ ಸಂಕನಗೌಡರ ನಿರೂಪಿಸಿದರು.

---

### ಬಸ್ ಹತ್ತುವಾಗ ಕಿಸೆ ಕತ್ತರಿಸಿ ಹಣ ದೋಚಿದ ಕಳ್ಳರು; ಕಣ್ಣೀರಿಟ್ಟ ರೈತ

# ಶೇಂಗಾ ಮಾರಾಟದ ₹48 ಸಾವಿರ ಕಳ್ಳರ ಪಾಲು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬರದ ನಡುವೆಯೂ ಎರಡು ಎಕರೆ ಜಮೀನಿನಲ್ಲಿ ಕಷ್ಟಪಟ್ಟು ಬೆಳೆದ ಶೇಂಗಾವನ್ನು ಮಾರಾಟ ಮಾಡಿ ಬಂದ ₹48 ಸಾವಿರ ಹಣವನ್ನು ಕಳ್ಳರು ದೋಚಿದ ಘಟನೆ ಶುಕ್ರವಾರ ಲಕ್ಷ್ಮೇಶ್ವರ ಬಸ್ ನಿಲ್ದಾಣದಲ್ಲಿ ನಡೆದಿದೆ. ಹಣ ಕಳೆದುಕೊಂಡ ರೈತ, ಹಣವನ್ನು ಪತ್ತೆಹಚ್ಚಿ ಕೊಡಿಸುವಂತೆ ಪೊಲೀಸ್ ಠಾಣೆಗೆ ಬಂದು ಕಣ್ಣೀರಿಟ್ಟು ಮನವಿ ಮಾಡಿದ್ದಾರೆ. ಹಾವೇರಿ ತಾಲೂಕಿನ ಕುರಗುಂದ ಗ್ರಾಮದ ರೈತ ಹನಮಂತಪ್ಪ ಗೂಳಪ್ಪ ಅನಿ ಹಣ ಕಳೆದುಕೊಂಡವರು. ಹನಮಂತಪ್ಪ ಅವರು ಎರಡು ಎಕರೆ ಜಮೀನಿನಲ್ಲಿ ಬೆಳೆದ 18 ಚೀಲ ಶೇಂಗಾವನ್ನು ಗುರುವಾರ ಲಕ್ಷ್ಮೇಶ್ವರ ಎಪಿ–ಎಂಸಿಯಲ್ಲಿ ಮಾರಾಟ ಮಾಡಿದ್ದರು. ಇದರಿಂದ ಬಂದ ಸುಮಾರು ₹48 ಸಾವಿರವನ್ನು ಕೃಷಿಗಾಗಿ ಮಾಡಿದ್ದ ಸಾಲ ತೀ–ರಿಸುವುದು ಹಾಗೂ ಕುಟುಂಬ ನಿರ್ವಹಣೆಗೆ ಬಳಸಿಕೊಳ್ಳುವ ಉದ್ದೇಶದಿಂದ ಜೋಪಾನವಾಗಿ ಇಟ್ಟುಕೊಂಡಿದ್ದರು.

ಎಪಿಎಂಸಿಯಿಂದ ಹಣ ಪಡೆದು ಊರಿಗೆ ತೆರಳಲು ಲಕ್ಷ್ಮೇಶ್ವರ ಬಸ್ ನಿಲ್ದಾಣಕ್ಕೆ ಬಂದಿದ್ದರು. ಬಸ್ ಹತ್ತುವ ವೇಳೆ ಕಳ್ಳರು ಹೊಂಚು ಹಾಕಿ ಅವರ ಕಿಸೆ ಕತ್ತರಿಸಿ ಹಣ ದೋಚಿದ್ದಾರೆ ಎನ್ನಲಾಗಿದೆ. ಟಿಕೆಟ್ ಪಡೆಯುವ ಸಂದರ್ಭದಲ್ಲಿ ಕಿಸೆಗೆ ಕೈಹಾಕಿದಾಗ ಹಣ ಕಾಣಿಸದಿರುವುದು ಗಮನಕ್ಕೆ ಬಂದಿದೆ. ಕಿಸೆ ಕತ್ತರಿಸಿರುವುದು ಕಂಡು ಆಘಾತಕ್ಕೊಳಗಾದ ಅವರು ಬಸ್‌ನಲ್ಲೇ ಕುಸಿದು ಬಿಕ್ಕಿ ಬಿಕ್ಕಿ ಅತ್ತಿದ್ದಾರೆ. ರೈತನ ಸ್ಥಿತಿ ಕಂಡು ಸಹ ಪ್ರಯಾಣಿಕರು ಹಾಗೂ ಶೇಂಗಾ ಮಾರಾಟಕ್ಕೆ ಬಂದಿದ್ದ ಮತ್ತೊಬ್ಬ ರೈತ ಸಮಾಧಾನಪಡಿಸಿ ಧೈರ್ಯ ತುಂಬಿದ್ದಾರೆ. ಕಷ್ಟಪಟ್ಟು ಬೆಳೆದ ಬೆಳೆಯನ್ನು ಮಾರಾಟ ಮಾಡಿ ಬಂದ ಹಣ ಕಳೆದುಕೊಂಡ ನೋವಿನಿಂದ ಹನಮಂತಪ್ಪ ತೀವ್ರ ಬೇಸರಗೊಂಡಿದ್ದಾರೆ.

ಹಣ ಕಳೆದುಕೊಂಡ ಬಳಿಕ ಮನೆಗೆ ತೆರಳಿದ ಅವರು ಆತ್ಮಹತ್ಯೆಗೆ ಯತ್ನಿಸಿದ್ದರು ಎನ್ನಲಾಗಿದ್ದು, ಕುಟುಂಬಸ್ಥರು ಸಮಾಧಾನ ಪಡಿಸಿದ್ದಾರೆ. ಶುಕ್ರವಾರ ಪೊಲೀಸ್ ಠಾಣೆಗೆ ಆಗಮಿಸಿದ ಹನಮಂತಪ್ಪ, ಕಷ್ಟಪಟ್ಟು ದುಡಿದು ಗಳಿಸಿದ ಹಣವನ್ನು ಕಳ್ಳರು ದೋಚಿದ್ದಾರೆ. ಹಣವನ್ನು ಪತ್ತೆಹಚ್ಚಿ ವಾಪಸ್ ಕೊಡಿಸಬೇಕು ಎಂದು ಪೊಲೀಸರ ಮುಂದೆ ಕಣ್ಣೀರಿಟ್ಟು ಮನವಿ ಮಾಡಿದರು. ಪೊಲೀಸರು ರೈತನಿಂದ ಘಟನೆಯ ಮಾಹಿತಿ ಪಡೆದು, ಕಳ್ಳರ ಪತ್ತೆಗೆ ಕ್ರಮ ಕೈಗೊಂಡು ಹಣ ಹುಡುಕಿಸಿಕೊಡುವುದಾಗಿ ಭರವಸೆ ನೀಡಿದ್ದಾರೆ.

> ಕಷ್ಟಪಟ್ಟು ದುಡಿದು ಬೆಳೆದ ಬೆಳೆಯನ್ನು ಮಾರಾಟ ಮಾಡಿ ಬಂದ ಹಣವನ್ನು ಕಳೆದುಕೊಂಡಿದ್ದೇನೆ. ಹಣವನ್ನು ಪತ್ತೆಹಚ್ಚಿ ವಾಪಸ್ ಕೊಡಿಸಬೇಕು.
>
> – ಹನಮಂತಪ್ಪ ಗೂಳಪ್ಪ ಅನಿ, ರೈತ

ಲಕ್ಷ್ಮೇಶ್ವರ ಬಸ್ ನಿಲ್ದಾಣದಲ್ಲಿ ಹಣ, ಸರ, ಮೊಬೈಲ್ ಸೇ–ರಿದಂತೆ ಪ್ರಯಾಣಿಕರ ಬೆಲೆಬಾಳುವ ವಸ್ತುಗಳ ಕಳ್ಳತನದ ಘಟನೆಗಳು ಪದೇಪದೇ ನಡೆಯುತ್ತಿವೆ. ಬಸ್ ಹತ್ತುವ ಹಾಗೂ ಇಳಿಯುವ ವೇಳೆ ಪ್ರಯಾಣಿಕರ ಗಮನ ಬೇರೆಡೆ ಸೆಳೆದು ಕಳ್ಳತನ ನಡೆಸುವವರ ಮೇಲೆ ಪೊಲೀಸರು ನಿಗಾ ವಹಿಸಬೇಕು. ಬಸ್ ನಿಲ್ದಾಣದಲ್ಲಿ ಪೊಲೀಸ್ ಬಂದೋಬಸ್ತ್ ಹೆಚ್ಚಿಸುವುದು, ಸಿಸಿಟಿವಿ ಕ್ಯಾಮೆರಾಗಳನ್ನು ಸಮರ್ಪಕವಾಗಿ ನಿರ್ವಹಿಸುವುದು ಸೇರಿದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ರೈತರು ಹಾಗೂ ನಾಗ–ರಿಕರು ಒತ್ತಾಯಿಸಿದ್ದಾರೆ.

---

### ಜೀವನದ ಸವಾಲು ಎದುರಿಸಲು ಹಿರಿಯರ ಮಾರ್ಗದರ್ಶನ ಅಗತ್ಯ

# ಹಿರಿಯರ ಅನುಭವ ಯುವಜನತೆಗೆ ದಾರಿದೀಪ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಿರಿಯ ನಾಗರಿಕರು ತಮ್ಮ ಜೀವನದಲ್ಲಿ ಕಂಡು–ಕಂಡ ಅನುಭವಗಳು ಯುವಜನತೆಗೆ ಅಮೂಲ್ಯ ಪಾಠಗಳಾಗಿವೆ. ಹಿರಿಯರ ಮಾರ್ಗದರ್ಶನ ಹಾಗೂ ಅನುಭವದಿಂದ ಯುವಜನತೆ ಜೀವನದ ಸವಾಲುಗಳನ್ನು ಎದುರಿಸುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು ಎಂದು ಪಿಎಸ್‌ಐ ಆನಂದ ಕ್ಯಾರಿಕಟ್ಟಿ ಹೇಳಿದರು.

ಪಟ್ಟಣದ ಬಾಳಿಕಾಯಿ ಅವರ ಮಿಲ್ ಆವರಣದಲ್ಲಿ ಶುಕ್ರವಾರ ತಾಲೂಕು ಹಿರಿಯ ನಾಗರಿಕರು ಹಾಗೂ ನಿವೃತ್ತ ನೌಕರರ ಸಂಘದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯರು ಸಮಾಜಕ್ಕೆ ದಾ–ರಿದೀಪಗಳಿದ್ದಂತೆ. ಜೀವನದಲ್ಲಿ ಹಲವು ಏಳು–ಬೀಳುಗಳನ್ನು ದಾಟಿ ಬಂದಿರುವ ಅವರ ಅನುಭವ ಅತ್ಯಂತ ಮಹತ್ವದ್ದು. ಸಮಾಜದಲ್ಲಿ ಹೇಗೆ ಬದುಕಬೇಕು, ಪರಸ್ಪರ ಗೌರವ, ಸಹನೆ ಹಾಗೂ ಹೊಂದಾಣಿಕೆಯಿಂದ ಜೀವನ ನಡೆಸುವುದು ಹೇಗೆ ಎಂಬುದನ್ನು ಹಿರಿಯರಿಂದ ಕಲಿಯಬೇಕು. ಯುವಜನತೆ ಹಿರಿಯರನ್ನು ನಿರ್ಲಕ್ಷಿಸದೆ ಅವರ ಅನುಭವವನ್ನು ಗೌರವದಿಂದ ಸ್ವೀಕರಿಸಬೇಕು ಎಂದರು. ಚಂಬಣ್ಣ ಬಾಳಿಕಾಯಿ ಮಾತನಾಡಿ, ಹಿರಿಯ ನಾಗರಿಕ–ರಿಂದ ಜೀವನದ ಅನುಭವದ ಪಾಠಗಳನ್ನು ಯುವಜನತೆ ಕಲಿತುಕೊಳ್ಳಬೇಕು. ಅನುಭವಿಗಳ ಮಾತುಗಳನ್ನು ಆಲಿಸಿ ಜೀವನದಲ್ಲಿ ಅಳವಡಿಸಿಕೊಂಡರೆ ಹಲವು ಸಮಸ್ಯೆಗಳನ್ನು ಸುಲಭವಾಗಿ ಎದುರಿಸಲು ಸಾಧ್ಯ. ಸಮಾಜದಲ್ಲಿ ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಸಮಾಧಾನ ಬೆಳೆಸಿಕೊಂಡರೆ ಜೀವನದಲ್ಲಿ ಶಾಂತಿ ನೆಲೆಸುತ್ತದೆ ಎಂದರು. ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಅಧ್ಯಕ್ಷತೆ ವಹಿಸಿ ಮಾತನಾಡಿ, ಹಿರಿಯ ನಾಗರಿಕರಿಗೆ ಸರ್ಕಾರದಿಂದ ದೊರೆಯಬೇಕಾದ ಸೌಲಭ್ಯಗಳು ಹಾಗೂ ವಿವಿಧ ಯೋಜನೆಗಳ ಮಾಹಿತಿ ತಲುಪಿಸುವ ನಿಟ್ಟಿನಲ್ಲಿ ಸಂಘ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ. ಹಿರಿಯರ ಸಮಸ್ಯೆಗಳಿಗೆ ಸ್ಪಂದಿಸಿ, ಅಗತ್ಯ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಸಂಘದ ಸಭೆ ಹಾಗೂ ವಿವಿಧ ಚಟುವಟಿಕೆಗಳನ್ನು ನಡೆಸಲು ಸೂಕ್ತ ಸ್ಥಳದ ಕೊರತೆಯಿದೆ. ಈ ಕುರಿತು ಪುರಸಭೆ ಅಧಿಕಾ–ರಿಗಳಿಗೆ ಮನವಿ ಸಲ್ಲಿಸಲಾಗಿದ್ದು, ಸಂಘದ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಶೀಘ್ರ ಸೂಕ್ತ ಸ್ಥಳ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿ ಜನಮನ್ನಣೆ ಗಳಿಸಿದ ಶಿಕ್ಷಕಿಯರಾದ ರಾಜೇಶ್ವರಿ ಕೋಲಕಾರ, ಅಕ್ಕಮ್ಮ ಕುಂಬಾರ, ರೇಖಾ ಘೋರ್ಪಡೆ ಹಾಗೂ ಆರೋಗ್ಯ ಇಲಾಖೆಯ ಆಶಾ ಭಂಡಾರಿಮಠ, ಭಾರತಿ ಹಳ್ಳಿಯವರನ್ನು ಸನ್ಮಾನಿಸಲಾಯಿತು.

> ಹಿರಿಯರು ಸಮಾಜಕ್ಕೆ ದಾರಿದೀಪಗಳಿದ್ದಂತೆ. ಅವರ ಜೀವನಾನುಭವವನ್ನು ಗೌರವದಿಂದ ಸ್ವೀಕರಿಸಿ, ಅದರಿಂದ ಯುವಜನತೆ ಜೀವನದ ಸವಾಲುಗಳನ್ನು ಎದುರಿಸುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು.
>
> – ಆನಂದ ಕ್ಯಾರಿಕಟ್ಟಿ, ಪಿಎಸ್‌ಐ

ಶಿಕ್ಷಕಿ ಮೈತ್ರಾದೇವಿ ಹಿರೇಮಠ ಉಪನ್ಯಾಸ ನೀಡಿದರು. ಮಹಿಳಾ ಘಟಕದ ಅಧ್ಯಕ್ಷೆ ಎಸ್.ಸಿ. ಅಳಗವಾಡಿ, ಚನ್ನಪ್ಪ ಕೋಲಕಾರ, ನಿಂಗಪ್ಪ ಬನ್ನಿ, ಬಿ.ಸಿ. ಶಿಗ್ಲಿಮಠ, ವಿ.ಸಿ. ರಬಕವಿ, ಎಂ.ಕೆ. ಕಳ್ಳಿಮಠ, ಎಲ್.ಎಸ್. ಅರಳಹಳ್ಳಿ, ಡಾ. ಶಿವಾನಂದ ಹೂವಿನ, ಈರಣ್ಣ ಅಂಕಲಕೋಟಿ, ಐ.ಎಸ್. ಮಡಿವಾಳರ, ಸುಗೀರಪ್ಪ ವಾಲಿಶೆಟ್ಟರ, ಎನ್.ಎಸ್. ಪವಾಡಶೆಟ್ಟರ, ನೀಲಪ್ಪ ಕರ್ಜೆಕಣವರ, ಮಂಜುಳಾ ಸತ್ಯಪ್ಪನವರ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

---

# ಪುಟ್ಟರಾಜ ಗುರುವರ್ಯರ ಭಾವಚಿತ್ರ ಮೆರವಣಿಗೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಗಾನಯೋಗಿ ಪಂ. ಪುಟ್ಟರಾಜ ಸೇವಾ ಸಮಿತಿ ವತಿಯಿಂದ ಪಂ. ಪುಟ್ಟರಾಜ ಕವಿ ಗವಾಯಿಗಳವರ 16ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಪಂ. ಪುಟ್ಟರಾಜ ಗುರುವರ್ಯರ ಭಾವಚಿತ್ರದ ಅದ್ಧೂರಿ ಮೆರವಣಿಗೆ ನಡೆಯಿತು.

ಮೆರವಣಿಗೆಯಲ್ಲಿ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡಿದ್ದರು.

ವಿವಿಧ ಕಲಾತಂಡಗಳು ಮೆರವಣಿಗೆಗೆ ಮೆರುಗು ನೀಡಿದರೆ, ಮಹಿಳೆಯರು ಕುಂಭಮೇಳದೊಂದಿಗೆ ಭಾಗವಹಿಸಿ ಗಮನ ಸೆಳೆದರು.ಪುಟ್ಟರಾಜ ಗುರುವರ್ಯರ ಭಾವಚಿತ್ರಕ್ಕೆ ಭಕ್ತರು ಗೌರವ ಸಲ್ಲಿಸಿ, ಅವರ ಸೇವೆ ಹಾಗೂ ಸಂಗೀತ–ಸಾಹಿತ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸಿದರು.

ಮೆರವಣಿಗೆಯು ಭಕ್ತಿಭಾವ ಹಾಗೂ ಸಂಭ್ರಮದಿಂದ ಜರುಗಿತು.

---

# ಪಶ್ಚಿಮ ಪದವೀಧರ ಕ್ಷೇತ್ರಕ್ಕೆ ಎಂಸಿಎಂಸಿ ರಚನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆ–2026 ಹಿನ್ನೆಲೆಯಲ್ಲಿ ಚುನಾವಣಾ ಪ್ರಚಾರದ ವೇಳೆ ಪ್ರಕಟವಾಗುವ ಜಾಹೀರಾತುಗಳ ಮೇಲ್ವಿಚಾರಣೆ ಹಾಗೂ ಪೇಯ್ಡ್ ನ್ಯೂಸ್ ಪ್ರಕರಣಗಳ ಪರಿಶೀಲನೆಗಾಗಿ ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿ (ಎಂಸಿಎಂಸಿ) ರಚಿಸಲಾಗಿದೆ. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ರಚಿಸಲಾಗಿರುವ ಸಮಿತಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸಿ.ಎನ್. ಶ್ರೀಧರ್ ಅಧ್ಯಕ್ಷರಾಗಿದ್ದಾರೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಅವರು ಸದಸ್ಯ ಕಾರ್ಯದರ್ಶಿ ಹಾಗೂ ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ. ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್. ಅವರು ಸದಸ್ಯರಾಗಿದ್ದು, ಪತ್ರಕರ್ತ ರಾಜು ಹೆಬ್ಬಳ್ಳಿ ಅವರನ್ನು ಹೆಚ್ಚುವರಿ ಸದಸ್ಯರನ್ನಾಗಿ ನೇಮಿಸಲಾಗಿದೆ. ಸ್ಪರ್ಧಿಸುವ ವೈಯಕ್ತಿಕ ಅಭ್ಯರ್ಥಿಗಳು ಹಾಗೂ ರಾಜಕೀಯ ಪಕ್ಷಗಳು ಪ್ರಕಟಿಸುವ ಎಲ್ಲ ರೀತಿಯ ಜಾಹೀರಾತುಗಳನ್ನು ವೀಕ್ಷಿಸಿ, ಪರಿಶೀಲಿಸುವುದು ಸಮಿತಿಯ ಪ್ರಮುಖ ಜವಾಬ್ದಾರಿಯಾಗಿದೆ. ಜಾಹೀರಾತುಗಳಿಗೆ ಸಂಬಂಧಿಸಿದಂತೆ ಚುನಾವಣಾ ನಿಯಮಗಳ ಪಾಲನೆಯಾಗುತ್ತಿದೆಯೇ ಎಂಬುದನ್ನು ಪರಿಶೀಲಿಸುವ ಜತೆಗೆ, ಪೇಯ್ಡ್ ನ್ಯೂಸ್ ಪ್ರಕರಣಗಳನ್ನೂ ಪರಿಶೀಲಿಸಿ ಅಗತ್ಯ ಕ್ರಮಕ್ಕೆ ಶಿಫಾರಸು ಮಾಡಲಿದೆ. ಸಮಿತಿಯು ಭಾರತ ಚುನಾವಣಾ ಆಯೋಗ ಹಾಗೂ ಸಂಬಂಧಿಸಿದ ಅಧಿಕಾರಿಗಳಿಂದ ಕಾಲಕಾಲಕ್ಕೆ ನೀಡಲಾಗುವ ನಿರ್ದೇಶನಗಳಂತೆ ಕರ್ತವ್ಯ ನಿರ್ವಹಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಸಿ.ಎನ್. ಶ್ರೀಧರ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

---

# ಗಾಂಧಿ ಜಯಂತಿ: 120 ಹೆಚ್ಚುವರಿ ಬಸ್‌ಗಳ ಸಂಚಾರ

**ವಿಜಯಸಾಕ್ಷಿ ಸುದ್ದಿ, ಗದಗ**

ಗಾಂಧಿ ಜಯಂತಿ ಹಾಗೂ ಸಾಲು ಸಾಲು ರಜೆ ಹಿನ್ನೆಲೆಯಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯಾಪ್ತಿಯ ವಿವಿಧ ವಿಭಾಗಗಳಿಂದ ಸುಮಾರು 120 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲು ವ್ಯವಸ್ಥೆ ಮಾಡಲಾಗಿದೆ.

ಅ.1 ಗುರುವಾರ, ಅ.2 ಶುಕ್ರವಾರ ಗಾಂಧಿ ಜಯಂತಿ, ಅ.3 ಶನಿವಾರ ಹಾಗೂ ಅ.4 ಭಾನುವಾರ ರಜೆ ಇರುವ ಹಿನ್ನೆಲೆಯಲ್ಲಿ ಬೆಂಗಳೂರು ಸೇ–ರಿದಂತೆ ವಿವಿಧ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವ ನಿರೀಕ್ಷೆಯಿದೆ. ಈ ಹೆಚ್ಚುವರಿ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುವುದು. ಬೆಂಗಳೂರಿನಿಂದ ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ಅಂತರರಾಜ್ಯ ಸ್ಥಳಗಳಿಗೆ ತೆರಳುವ ಪ್ರಯಾಣಿಕರಿಗಾಗಿ ಅ.1 ಮತ್ತು 2ರಂದು ವಿಶೇಷ ಹೆಚ್ಚುವರಿ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್‌ಗಳಲ್ಲಿ ಸಂಚರಿಸುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಧನ-ಕನಕ, ಸ್ಥಾನಮಾನಕ್ಕಿಂತ ದಾನ-ದಯೆ ಮುಖ್ಯ: ಶಿವಪ್ರಕಾಶ ಸ್ವಾಮೀಜಿ

# ಸದ್ಗುಣವೇ ಬದುಕಿನ ನಿಜ ಅಲಂಕಾರ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮನುಷ್ಯನ ಬದುಕಿಗೆ ಹಣ, ಆಸ್ತಿ, ಸ್ಥಾನಮಾನಕ್ಕಿಂತ ದಾನ, ದಯೆ, ಕರುಣೆ, ವಾತ್ಸಲ್ಯ ಸೇರಿದಂತೆ ಸದ್ಗುಣಗಳೇ ನಿಜವಾದ ಅಲಂಕಾರ. ಸದ್ಗುಣಗಳಿಲ್ಲದ ಸಂಪತ್ತು, ವಿದ್ಯೆ ಹಾಗೂ ಸ್ಥಾನಮಾನಗಳು ಬದುಕಿಗೆ ಪೂರ್ಣತೆಯನ್ನು ನೀಡುವುದಿಲ್ಲ ಎಂದು ಹಿರೇಮಠ ಶ್ರೀಕ್ಷೇತ್ರ ಕೊಟ್ಟೂರಿನ ಶ್ರೀ ಗುರು ಕೊಟ್ಟೂರೇಶ್ವರ ಸ್ವಾಮಿಯ ಕ್ರಿಯಾಮೂರ್ತಿಗಳಾದ ಶ್ರೀ ಶ್ರೀ ಶ್ರೀ ಶಿವಪ್ರಕಾಶ ಸ್ವಾಮೀಜಿ ಹೇಳಿದರು.

ತಾಲೂಕಿನ ಸಮೀಪದ ಶಿಗ್ಲಿ ಗ್ರಾಮದಲ್ಲಿ ವೀರಣ್ಣ ಹಾಲಪ್ಪ ಪವಾಡದ ಅವರ ಮನೆಯಲ್ಲಿ ದಯಮಾಡಿಸಿದ ಸಂದರ್ಭದಲ್ಲಿ ಭಕ್ತರಿಗೆ ಆಶೀರ್ವಚನ ನೀಡಿದ ಅವರು, ಜಗತ್ತಿನ ಯಾವುದೇ ಚಿಂತಕರು ಆದರ್ಶ ಗುಣಗಳ ಮಹತ್ವವನ್ನು ಅಲ್ಲಗಳೆದಿಲ್ಲ.

ಚಿನ್ನ, ಬೆಳ್ಳಿ, ಉಡುಗೆ–ತೊಡುಗೆಗಳು ಹೊರಗಿನ ಅಲಂಕಾರಗಳಾದರೆ, ದಾನ, ದಯೆ, ಕರುಣೆ ಹಾಗೂ ವಾತ್ಸಲ್ಯಗಳು ಮನುಷ್ಯನ ಅಂತರಂಗವನ್ನು ಅಲಂಕರಿಸುವ ಗುಣಗಳಾಗಿವೆ ಎಂದರು.

> ಮನುಷ್ಯನ ಬದುಕಿನ ನಿಜವಾದ ಅಲಂಕಾರ ಧನ-ಕನಕವಲ್ಲ; ದಾನ, ದಯೆ, ಕರುಣೆ ಮತ್ತು ವಾತ್ಸಲ್ಯದಂತಹ ಸದ್ಗುಣಗಳು. ಕಷ್ಟದ ಬೆಟ್ಟವನ್ನು ಏರಿ ಇಳಿದಾಗಲೇ ನಾವು ಸುಖದ ಸಾಗರವನ್ನು ತಲುಪುತ್ತೇವೆ.
>
> – ಶ್ರೀ ಶಿವಪ್ರಕಾಶ ಸ್ವಾಮೀಜಿ

ದೈವೀ ಗುಣಗಳು ಬದುಕಿಗೆ ಅಲೌಕಿಕ ಬೆಲೆ ನೀಡುತ್ತವೆ. ಅವುಗಳಿಲ್ಲದಿದ್ದರೆ ಧನ–ಕನಕ, ಸ್ಥಾನಮಾನ, ವಿದ್ಯೆ–ಬುದ್ಧಿ ಎಲ್ಲವೂ ನಿಷ್ಪ್ರಯೋಜಕ. ಭವ್ಯವಾದ ಮನೆ ಹಾಗೂ ಮಹಡಿಗಳನ್ನು ನಿರ್ಮಿಸುವುದರಿಂದ ಮಾತ್ರ ಬದುಕು ಪೂರ್ಣವಾಗುವುದಿಲ್ಲ. ಮನೆಯ ಜತೆಗೆ ಮನಸ್ಸನ್ನೂ ಸದ್ಭಾವನೆಯಿಂದ ಅಲಂಕರಿಸಿ, ಸುಜ್ಞಾನದ ದೀಪ ಬೆಳಗಿಸಬೇಕು ಎಂದು ಹೇಳಿದರು.

ಮನುಷ್ಯನ ಕೈ, ಮನಸ್ಸು ಮತ್ತು ಬುದ್ಧಿ ಸತ್ಕಾರ್ಯದಲ್ಲಿ ತೊಡಗಬೇಕು. ನಿರಂತರ ಪರಿಶ್ರಮ ಹಾಗೂ ಉತ್ತಮ ಚಿಂತನೆಯ ಮೂಲಕ ಮನುಷ್ಯನು ಮಾನವತ್ವದಿಂದ ದೈವತ್ವದತ್ತ ಏರಲು ಸಾಧ್ಯ. ಜೀವನದಲ್ಲಿ ಎದುರಾಗುವ ಕಷ್ಟಗಳನ್ನು ಧೈರ್ಯದಿಂದ ಎದುರಿಸಿ ಮುನ್ನಡೆಯಬೇಕು ಎಂದು ಶಿವಪ್ರಕಾಶ ಸ್ವಾಮೀಜಿ ಕರೆ ನೀಡಿದರು.

ಈ ಸಂದರ್ಭದಲ್ಲಿ ನಿರ್ಮಲಾದೇವಿ ವೀರಣ್ಣ ಪವಾಡದ, ಲಾವಣ್ಯ ಅನ್ನದಾನೇಶ್ವರ ಪವಾಡದ, ಲಕ್ಷ್ಮೀ ವೀರಸೋಮೇಶ್ವರ ಪವಾಡದ, ಶಿವಯೋಗರಾಜ, ವಿಜಯವೀಣಾ, ನಮ್ರತಾ, ನಂದೀಶ್ವರ, ರಮೇಶ್ ಬಸವಂತಪ್ಪ ಅಣ್ಣಿಗೇರಿ, ಜಗದೀಶ್ ಹಿರೇಮಠ, ರಾಮು ಗೋಕರ್ ಸೇರಿದಂತೆ ಹಲವರು ಉಪಸ್ಥಿತ–ರಿದ್ದರು.

---

# ಜಾನಪದ ಪರಿಷತ್ ಅಧ್ಯಕ್ಷ ಮರುನೇಮಕ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕನ್ನಡ ಜಾನಪದ ಪರಿಷತ್ ಗಜೇಂದ್ರಗಡ ತಾಲೂಕು ಘಟಕದ ಅಧ್ಯಕ್ಷರಾಗಿ ಶಿಕ್ಷಕ ಎಂ.ಕೆ. ಬೇವಿನಕಟ್ಟಿ ಅವರನ್ನು ಮರುನೇಮಕ ಮಾಡಲಾಗಿದೆ.

ಗದಗದ ವಿ.ಡಿ.ಎಸ್.ಟಿ. ಕಾಲೇಜು ಆವರಣದಲ್ಲಿ ಇತ್ತೀಚೆಗೆ ನಡೆದ ಗದಗ ತಾಲೂಕು ಕನ್ನಡ ಜಾನಪದ ಪರಿಷತ್ ಘಟಕದ ಪದಗ್ರಹಣ ಸಮಾರಂಭದಲ್ಲಿ ಪರಿಷತ್ ರಾಜ್ಯಾಧ್ಯಕ್ಷ ಎಸ್. ಬಾಲಾಜಿ ಅವರು ಬೇವಿನಕಟ್ಟಿ ಅವರ ಮರುನೇಮಕವನ್ನು ಪ್ರಕಟಿಸಿದರು.

ಕಳೆದ ಅವಧಿಯಲ್ಲಿ ಗಜೇಂದ್ರಗಡ ತಾಲೂಕು ಘಟಕದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದ ಬೇವಿನಕಟ್ಟಿ ಅವರು ಜಾನಪದ ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಗ್ರಾಮೀಣ ಪರಂಪರೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಹಲವು ಕಾರ್ಯಕ್ರಮಗಳನ್ನು ಸಂಘಟಿಸಿ ಘಟಕವನ್ನು ಸಕ್ರಿಯವಾಗಿ ಮುನ್ನಡೆಸಿದ್ದಾರೆ. ಗ್ರಾಮೀಣ ಭಾಗದ ಜನಪದ ಕಲೆಗಳಿಗೆ ವೇದಿಕೆ ಕಲ್ಪಿಸುವುದು, ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವುದು ಹಾಗೂ ಯುವಪೀಳಿಗೆಗೆ ಸ್ಥಳೀಯ ಸಂಸ್ಕೃತಿಯ ಪರಿಚಯ ಮಾಡಿಸುವ ಕಾರ್ಯದಲ್ಲಿ ಅವರು ಆಸಕ್ತಿ ವಹಿಸಿರುವುದನ್ನು ಎಸ್. ಬಾಲಾಜಿ ಶ್ಲಾಘಿಸಿದರು.

ಆಧುನಿಕತೆಯ ಭರಾಟೆಯಲ್ಲಿ ಗ್ರಾಮೀಣ ಬದುಕಿನೊಂದಿಗೆ ಬೆಸೆದುಕೊಂಡಿರುವ ಅನೇಕ ಜಾನಪದ ಕಲೆ, ಆಚರಣೆ, ಸಂಪ್ರದಾಯ, ಹಾಡು, ಕಥೆ ಹಾಗೂ ಸ್ಥಳೀಯ ಪರಂಪರೆಗಳು ನಿಧಾನವಾಗಿ ಮರೆಯಾಗುತ್ತಿವೆ. ಇಂತಹ ಸಂದರ್ಭದಲ್ಲಿ ಜಾನಪದ ಪರಂಪರೆಯನ್ನು ದಾಖಲಿಸಿ, ಉಳಿಸಿ, ಮುಂದಿನ ಪೀಳಿಗೆಗೆ ಪರಿಚಯಿಸುವ ಮಹತ್ವದ ಜವಾಬ್ದಾರಿ ಜಾನಪದ ಪರಿಷತ್ ಮೇಲಿದೆ ಎಂದು ಹೇಳಿದರು.

ಗಜೇಂದ್ರಗಡ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಲ್ಲಿ ಜಾನಪದ ಕಲೆ ಮತ್ತು ಸಂಸ್ಕೃತಿಯ ಶ್ರೀಮಂತ ಪರಂಪರೆಯಿದ್ದು, ಸ್ಥಳೀಯ ಕಲಾವಿದರು ಹಾಗೂ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ತಾಲೂಕು ಘಟಕವನ್ನು ಮತ್ತಷ್ಟು ಬಲಪಡಿಸಬೇಕು. ಶಾಲಾ–ಕಾಲೇಜು ವಿದ್ಯಾರ್ಥಿಗಳಲ್ಲಿ ಜಾನಪದದ ಬಗ್ಗೆ ಆಸಕ್ತಿ ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಸಲಹೆ ನೀಡಿದರು.

ಮರುನೇಮಕಗೊಂಡ ಎಂ.ಕೆ. ಬೇವಿನಕಟ್ಟಿ ಮಾತನಾಡಿ, ಪರಿಷತ್ ಮತ್ತೊಮ್ಮೆ ತಮ್ಮ ಮೇಲೆ ವಿಶ್ವಾಸವಿಟ್ಟು ಜವಾಬ್ದಾರಿ ನೀಡಿರುವುದು ಸಂತಸ ತಂದಿದೆ. ಕಳೆದ ಅವಧಿಯಲ್ಲಿ ಎಲ್ಲರ ಸಹಕಾರದಿಂದ ಕೈಗೊಂಡ ಕಾರ್ಯಗಳನ್ನು ಮುಂದುವ–ರಿಸುವುದರ ಜತೆಗೆ, ಗಜೇಂದ್ರಗಡ ತಾಲೂಕಿನಲ್ಲಿ ಜಾನಪದ ಕಲೆ ಹಾಗೂ ಗ್ರಾಮೀಣ ಸಂಸ್ಕೃತಿಗೆ ಇನ್ನಷ್ಟು ವೇದಿಕೆ ಕಲ್ಪಿಸಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದರು.

> ಜಾನಪದ ಪರಂಪರೆಯನ್ನು ದಾಖಲಿಸಿ, ಉಳಿಸಿ, ಮುಂದಿನ ಪೀಳಿಗೆಗೆ ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿ. ಗಜೇಂದ್ರಗಡ ಘಟಕವನ್ನು ಮತ್ತಷ್ಟು ಸಕ್ರಿಯಗೊಳಿಸಿ, ಸ್ಥಳೀಯ ಕಲಾವಿದರು ಹಾಗೂ ಯುವ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸಬೇಕು.
>
> – ಎಸ್. ಬಾಲಾಜಿ, ರಾಜ್ಯಾಧ್ಯಕ್ಷರು, ಕನ್ನಡ ಜಾನಪದ ಪರಿಷತ್

ಜಿಲ್ಲಾಧ್ಯಕ್ಷ ಐ.ಬಿ. ಬೆನಕೊಪ್ಪ ಮಾತನಾಡಿ, ತಾಲೂಕು ಘಟಕದ ಕಾರ್ಯಚಟುವಟಿಕೆಗಳಿಗೆ ಜಿಲ್ಲಾ ಘಟಕದಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕದ ಸದಸ್ಯರಾದ ಬಸವರಾಜ ಕೊಟಗಿ, ಬಿ.ವಿ. ದೇಸಾಯಿಪಟ್ಟಿ ಸೇರಿದಂತೆ ಪರಿಷತ್ ಪದಾಧಿಕಾರಿಗಳು, ಸದಸ್ಯರು ಹಾಗೂ ಜಾನಪದಾಸಕ್ತರು ಉಪಸ್ಥಿತರಿದ್ದರು.

# ಉದ್ಯಮಿ ಭಾರತ ಸಮಾವೇಶಕ್ಕೆ ಸಜ್ಜು

**ವಿಜಯಸಾಕ್ಷಿ ಸುದ್ದಿ, ಗದಗ**

ಉದ್ಯಮಿಗಳಿಗೆ ಹೊಸ ಅವಕಾಶಗಳು ಹಾಗೂ ಉದ್ಯಮ ಕ್ಷೇತ್ರದ ಬೆಳವಣಿಗೆಗೆ ವೇದಿಕೆ ಕಲ್ಪಿಸುವ 'ಉದ್ಯಮಿ ಭಾರತ ಸಮಾವೇಶ ಮತ್ತು ಪ್ರದರ್ಶನ–2026' ಡಿ.4ರಿಂದ 6ರವರೆಗೆ ಬೆಂಗಳೂರಿನ ಬೆಂಗಳೂರು ಇಂಟರ್‌ನ್ಯಾಷನಲ್ ಎಕ್ಸಿಬಿಷನ್ ಸೆಂಟರ್‌ನಲ್ಲಿ ನಡೆಯಲಿದೆ.

IAC Technologies Pvt. Ltd. ಸಂಸ್ಥೆಯ ವತಿಯಿಂದ ಆಯೋಜಿಸಲಾಗುತ್ತಿರುವ ಸಮಾವೇಶದಲ್ಲಿ ಉದ್ಯಮಿಗಳು ತಮ್ಮ ಉತ್ಪನ್ನ ಹಾಗೂ ಸೇವೆಗಳ ಪ್ರದರ್ಶನಕ್ಕಾಗಿ ವಿವಿಧ ದರಗಳ ಸ್ಟಾಲ್ ಪ್ಯಾಕೇಜ್‌ಗಳನ್ನು ಪಡೆಯಬಹುದಾಗಿದೆ.

ಸ್ಟಾಲ್ ನಿರ್ಮಾಣಕ್ಕೆ ಆಸಕ್ತಿ ಹೊಂದಿರುವ ಉದ್ದಿಮೆದಾರರು ಪ್ರಸನ್ನ ವಿ.ಎನ್. (ಮೊ. 7899253363) ಹಾಗೂ ಮಂಜುನಾಥ ಎ.ಸಿ. (ಮೊ. 9743784166) ಅವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಪರ್ವಕ್ಕೆ ಸಜ್ಜು

**ವಿಜಯಸಾಕ್ಷಿ ಸುದ್ದಿ, ಗದಗ**

ವಿವಿಧ ರಾಜ್ಯಗಳ ಕುಶಲಕರ್ಮಿಗಳು ತಯಾರಿಸುವ ಸಾಂಪ್ರದಾಯಿಕ ಕರಕುಶಲ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟಕ್ಕೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ 'ಕರ್ನಾಟಕ ಪರ್ವ–2026' ಆಯೋಜಿಸಲಾಗಿದೆ.

ಸೆ.26ರಿಂದ 30ರವರೆಗೆ ಬೆಂಗಳೂರಿನ ಅರಮನೆ ಮೈದಾನದ 'ತ್ರಿಪುರ ವಾಸಿನಿ' ಆವರಣದಲ್ಲಿ ಐದು ದಿನಗಳ ಕಾಲ ನಡೆಯಲಿರುವ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಉದ್ಘಾಟಿಸಲಿದ್ದಾರೆ.

ಕರ್ನಾಟಕ ಸೇರಿದಂತೆ ವಿವಿಧ ಭಾಗಗಳ ಅಲ್ಪಸಂಖ್ಯಾತ ಸಮುದಾಯದ ಕುಶಲಕರ್ಮಿಗಳು ತಯಾರಿಸಿರುವ ವಿಶಿಷ್ಟ ಕರಕುಶಲ ಹಾಗೂ ಸಾಂಪ್ರದಾಯಿಕ ಉತ್ಪನ್ನಗಳನ್ನು ಒಂದೇ ವೇದಿಕೆಯಲ್ಲಿ ಪ್ರದರ್ಶಿಸಿ, ಮಾರಾಟಕ್ಕೆ ಅವಕಾಶ ಕಲ್ಪಿಸಲಾಗುವುದು. 'ಕಲೆ ಉಳಿಯಲಿ, ಕೌಶಲ್ಯ ಬೆಳೆಯಲಿ, ಕುಶಲಕರ್ಮಿಗಳ ಬದುಕು ಸಮೃದ್ಧವಾಗಲಿ' ಎಂಬ ಆಶಯದೊಂದಿಗೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಇ–ಕಾಮರ್ಸ್, ಡಿಜಿಟಲ್ ಮಾರ್ಕೆಟಿಂಗ್, ಆಧುನಿಕ ವ್ಯಾಪಾರ ಪದ್ಧತಿಗಳು, ಉದ್ಯಮ ಸಂಪರ್ಕ, ಮಾರುಕಟ್ಟೆ ವಿಸ್ತರಣೆ ಹಾಗೂ ವ್ಯವಹಾರ ಜಾಲಬಂಧನ ಕುರಿತು ತರಬೇತಿ ಮತ್ತು ಜ್ಞಾನವರ್ಧಕ ಕಾರ್ಯಕ್ರಮಗಳು ನಡೆಯಲಿವೆ. ಇದರೊಂದಿಗೆ ಸಾಂಸ್ಕೃತಿಕ ಸಂಜೆ ಹಾಗೂ ವೈವಿಧ್ಯಮಯ ಆಹಾರ ಮೇಳವೂ ಆಯೋಜಿಸಲಾಗಿದೆ.

ಗದಗ ಜಿಲ್ಲೆಯ ಸಾರ್ವಜನಿಕರು, ಕಲಾಸಕ್ತರು, ಉದ್ಯಮಿಗಳು, ವ್ಯಾಪಾರಸ್ಥರು ಹಾಗೂ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ 'ಕರ್ನಾಟಕ ಪರ್ವ–2026'ಕ್ಕೆ ಭೇಟಿ ನೀಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಲೆಗೆ ದೇಣಿಗೆ ನೀಡಿದ ದಾನಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಅಡವಿಸೋಮಾಪುರ ಸಣ್ಣ ತಾಂಡೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಮಧ್ಯಾಹ್ನದ ಬಿಸಿಯೂಟ ವಿತರಿಸಲು ಅಗತ್ಯವಿದ್ದ ₹12 ಸಾವಿರ ಮೌಲ್ಯದ ಸ್ಟೀಲ್ ಟ್ರಾಲಿಯನ್ನು ದೇಣಿಗೆಯಾಗಿ ನೀಡಿದ ಕು. ಶಂಕರ ಹನಮಪ್ಪ ಪವಾರ ಅವರನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು.

ಬಿಸಿಯೂಟಕ್ಕೆ ಅನ್ನ ಹಾಗೂ ಸಾಂಬಾರ್ ವಿತರಿಸಲು ಅನುಕೂಲವಾಗುವಂತೆ ಸ್ಟೀಲ್ ಟ್ರಾಲಿಯನ್ನು ನೀಡಿದ ದಾನಿಯ ಸೇವೆಯನ್ನು ಶಾಲೆಯ ಶಿಕ್ಷಕರು ಹಾಗೂ ಸಿಬ್ಬಂದಿ ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಂಕರ ಹಡಗಲಿ, ಕ್ಷೇತ್ರ ಸಮನ್ವಯಾಧಿಕಾರಿ ಜೆ.ಎ. ಭಾವಿಕಟ್ಟಿ, ಸಂಪನ್ಮೂಲ ವ್ಯಕ್ತಿ ಎಂ.ಐ. ಮುಗಳಿ, ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್., ಶಿಕ್ಷಕಿಯರಾದ ಶ್ರೀಮತಿ ಪಿ.ಬಿ. ಕಿಲಬನವರ, ಎಸ್.ಟಿ. ಹಳಕಟ್ಟಿ, ದೀಪಾ ಪವಾರ, ದೇವಕ್ಕ ಲಮಾಣಿ ಹಾಗೂ ಗಂಗವ್ವ ಲಮಾಣಿ ಉಪಸ್ಥಿತರಿದ್ದರು.

# ಸರ್ಕಾರೇತರ ವಸತಿ ನಿಲಯ, ಶಾಲೆ ಕಾಲೇಜುಗಳ ನೋಂದಣಿ ಕಡ್ಡಾಯ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲೆಯಲ್ಲಿ 6ರಿಂದ 18 ವರ್ಷದೊಳಗಿನ ಮಕ್ಕಳಿಗಾಗಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರೇತರ ಸಂಸ್ಥೆಗಳು, ನಾಗರಿಕ ಸಮಾಜ ಸಂಸ್ಥೆಗಳು, ಟ್ರಸ್ಟ್‌ಗಳು, ಧಾರ್ಮಿಕ ಸಂಸ್ಥೆಗಳು ಹಾಗೂ ಖಾಸಗಿ ವ್ಯಕ್ತಿಗಳಿಂದ ನಡೆಸಲ್ಪಡುವ ಔಪಚಾರಿಕ ಅಥವಾ ಅನೌಪಚಾರಿಕ ಶೈಕ್ಷಣಿಕ ವಸತಿ ನಿಲಯಗಳು, ವಸತಿ ಶಾಲೆಗಳು ಹಾಗೂ ಕಾಲೇಜುಗಳ ನೋಂದಣಿ ಕಡ್ಡಾಯವಾಗಿದೆ.

ವಸತಿ ನಿಲಯಗಳ ಮಾರ್ಗಸೂಚಿಯನ್ವಯ ಸಂಬಂಧಿಸಿದ ಸಂಸ್ಥೆಗಳು ನೋಂದಣಿ ಮಾಡಿಕೊಳ್ಳಬೇಕು. ಇದಕ್ಕಾಗಿ ಅರ್ಜಿ ನಮೂನೆ–1 ಅನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು 2026ರ ಅಕ್ಟೋಬರ್ 9ರೊಳಗೆ ಕಚೇರಿ ವೇಳೆಯಲ್ಲಿ ಸಲ್ಲಿಸಬೇಕು.

ನಿಗದಿತ ದಿನಾಂಕದ ನಂತರ ಸಲ್ಲಿಕೆಯಾಗುವ ಪ್ರಸ್ತಾವನೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಇಲಾಖೆ ತಿಳಿಸಿದೆ.

ಸ್ವೀಕರಿಸಿದ ಅರ್ಜಿಗಳನ್ನು ತನಿಖಾ ಸಮಿತಿಯ ಮೂಲಕ ಪರಿಶೀಲಿಸಿ, ಸಮಿತಿಯ ವರದಿಯ ಆಧಾರದ ಮೇಲೆ ಜಿಲ್ಲಾಧಿಕಾರಿಗಳಿಗೆ ಶಿಫಾರಸು ಸಲ್ಲಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.



ಧಾರವಾಡ: ತಾಲೂಕಿನ ರಾಮಾಪೂರ ಗ್ರಾಮದ ಪ್ರಾಥಮಿಕವಾಗಿ ಕೃಷಿ ಪತ್ತಿನ ಸಹಕಾರಿ ಸಂಘದವತಿಯಿಂದ ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಯಿತು. ಸಂಘದ ಅಧ್ಯಕ್ಷರು, ಸದ್ಯಸರು ಕಾರ್ಯಕ್ರಮದಲ್ಲಿದ್ದರು.

## ನಗರ ಮಾತ್ರವಲ್ಲ, ಗ್ರಾಮಗಳಲ್ಲೂ ಸ್ವಚ್ಛತೆ ಕಾಪಾಡಿ; ಜಿಲ್ಲಾಧಿಕಾರಿ ಸ್ನೇಹಲ್ ಆರ್.

# ಕಸ ವಿಲೇವಾರಿಯಲ್ಲಿ ನಿರ್ಲಕ್ಷ್ಯ ಬೇಡ

**ವಿಜಯಸಾಕ್ಷಿ ಸುದ್ದಿ, ಧಾರವಾಡ**




ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಡೆಯುತ್ತಿಲ್ಲ ಎಂಬುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಜಿಲ್ಲಾಧಿಕಾರಿ ಸ್ನೇಹಲ್ ಆರ್., ಕಸ ವಿಲೇವಾರಿ ಹಾಗೂ ಸ್ವಚ್ಛತಾ ಕಾರ್ಯದಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಶುಕ್ರವಾರ ಸ್ವಚ್ಛತಾ ಹೀ ಸೇವಾ ಅಭಿಯಾನದ 'ಸ್ವಚ್ಛತೆಯಲ್ಲಿ ಸಹಭಾಗಿತ್ವ, ಸ್ವಚ್ಛ ಭಾರತ ವಿಕಸಿತ ಭಾರತ' ಕುರಿತು ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಕೈಗೊಳ್ಳುತ್ತಿರುವ ಸ್ವಚ್ಛತಾ ಕಾರ್ಯಕ್ರಮಗಳು ಹಾಗೂ ನಗರಾಭಿವೃದ್ಧಿ ಯೋಜನೆಗಳ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ನಿರಂತರವಾಗಿ ಮಾಹಿತಿ ಹಂಚಿಕೊಳ್ಳಬೇಕು. ರಸ್ತೆ ಬದಿಗಳಲ್ಲಿರುವ ಕಸವನ್ನು ತಕ್ಷಣ ತೆರವುಗೊಳಿಸಬೇಕು. ಸ್ವಚ್ಛತಾ ಕಾರ್ಯಗಳು ಕೇವಲ ಪ್ರಚಾರಕ್ಕೆ ಸೀಮಿತವಾಗದೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಬೇಕು ಎಂದರು.

ಬಡವರು ಹಾಗೂ ಕೊಳಚೆ ಪ್ರದೇಶಗಳಲ್ಲಿ ವಾಸಿಸುವ ಜನರ ಮನೆಗಳಲ್ಲಿ ಕಸ ಸಂಗ್ರಹಿಸಿಡಲು ಸೂಕ್ತ ಸ್ಥಳವಿಲ್ಲ. ಹೀಗಾಗಿ ಅವರು ಕಸವನ್ನು ಹೊರಗೆ ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸಾರ್ವಜನಿಕರೊಂದಿಗೆ ಚರ್ಚಿಸಿ ಸೂಕ್ತ ವ್ಯವಸ್ಥೆ ರೂಪಿಸಬೇಕು ಎಂದು ಸೂಚಿಸಿದರು.

ಕಸ ಸಂಗ್ರಹಣಾ ವಾಹನಗಳನ್ನು ನಿಗದಿತ ಸಮಯಕ್ಕೆ ಕಳುಹಿಸಬೇಕು. ಅಗತ್ಯವಿರುವ ಪ್ರದೇಶಗಳಲ್ಲಿ ಪ್ರತಿ ಎರಡು ಗಂಟೆಗೊಮ್ಮೆ ಕಸ ಸಂಗ್ರಹಿಸುವ ವ್ಯವಸ್ಥೆ ಮಾಡಬೇಕು. ನಿರ್ದಿಷ್ಟ ಸ್ಥಳಗಳಲ್ಲಿ ಸ್ಥಿರ ಕಸದ ಬುಟ್ಟಿಗಳನ್ನು ಅಳವಡಿಸಿ, ಜನರು ಅಲ್ಲಿಯೇ ಕಸ ಹಾಕುವಂತೆ ಜಾಗೃತಿ ಮೂಡಿಸಬೇಕು ಎಂದರು.

ಪ್ರತಿ ಮನೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸುವ ವ್ಯವಸ್ಥೆ ಮಾಡಬೇಕು. ಸಾರ್ವಜನಿಕರು ತ್ಯಾಜ್ಯ ವಿಂಗಡಿಸಿ ನೀಡಲು ಸೂಕ್ತ ವಿಲೇವಾರಿ ಕೇಂದ್ರಗಳನ್ನು ನಿರ್ಮಿಸಬೇಕು. ಅಗತ್ಯವಿರುವ ಕಡೆ ಪ್ರತ್ಯೇಕ ಕಸದ ತೊಟ್ಟಿಗಳನ್ನು ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಿಸಲು ವಿನೂತನ ಯೋಜನೆಗಳನ್ನು ರೂಪಿಸಬೇಕು. ಹಲವು ಕಡೆ ತ್ಯಾಜ್ಯ ಹಾಗೂ ಕಟ್ಟಡ ತ್ಯಾಜ್ಯ ಬಿದ್ದಿರುವುದು ಕಂಡುಬರುತ್ತಿದ್ದು, ಕೆಲವೆಡೆ ಮಾತ್ರ ಸ್ವಚ್ಛಗೊಳಿಸಿ ಉಳಿದ ಭಾಗಗಳನ್ನು ಹಾಗೆಯೇ ಬಿಡಲಾಗುತ್ತಿದೆ. ಈ ಕುರಿತು ಸಮಗ್ರ ವರದಿ ಸಲ್ಲಿಸಬೇಕು ಎಂದರು.

ತಾಲೂಕಿನ ಗ್ರಾಮಗಳಲ್ಲಿ ಎಲ್ಲೆಡೆ ಕಸ ಕಂಡುಬರುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಒಂದು ಗ್ರಾಮದಲ್ಲಿಯೂ ಸಮರ್ಪಕ ತ್ಯಾಜ್ಯ ನಿರ್ವಹಣೆ ನಡೆಯದಂತಾಗಬಾರದು. ಅಧಿಕಾರಿಗಳು ತಂಡವಾಗಿ ಕಾರ್ಯನಿರ್ವಹಿಸಿ ಗ್ರಾಮಗಳನ್ನು ಸ್ವಚ್ಛವಾಗಿಡಲು ಕ್ರಮ ಕೈಗೊಳ್ಳಬೇಕು. ಮಿಶ್ರ ಕಸ ನೀಡುವ ಪ್ರದೇಶಗಳಲ್ಲಿ ಸಂಬಂಧಿಸಿದವರಿಗೆ ನೋಟಿಸ್ ನೀಡಬೇಕು ಎಂದು ನಿರ್ದೇಶಿಸಿದರು.

ಖಾಸಗಿ ಸಂಘ–ಸಂಸ್ಥೆಗಳು ಸ್ವಯಂಪ್ರೇರಿತರಾಗಿ ರಸ್ತೆ ಬದಿಯ ಕಸ ಸ್ವಚ್ಛಗೊಳಿಸಲು ಮುಂದಾದರೆ, ಅವರಿಗೆ ಅಗತ್ಯ ಉಪಕರಣ ಹಾಗೂ ಸೌಲಭ್ಯ ಒದಗಿಸಿ ಪ್ರೋತ್ಸಾಹಿಸಬೇಕು. ಇಂತಹ ಸಂಸ್ಥೆಗಳನ್ನು ಗುರುತಿಸಿ ಗೌರವಿಸಬೇಕು ಎಂದರು.

ಕಸದ ಸಮಸ್ಯೆಯಿಂದ ಸದ್ಯ ದೊಡ್ಡ ಮಟ್ಟದ ರೋಗಗಳು ಕಾಣಿಸದಿದ್ದರೂ, ಮುಂದಿನ ದಿನಗಳಲ್ಲಿ ಅದರ ದುಷ್ಪರಿಣಾಮ ಎದುರಾಗುವ ಸಾಧ್ಯತೆಯಿದೆ. ಆದ್ದರಿಂದ ತ್ಯಾಜ್ಯ ನಿರ್ವಹಣೆಯನ್ನು ಗಂಭೀರವಾಗಿ ಪರಿಗಣಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಸೂಚಿಸಿದರು.

ಸಭೆಯಲ್ಲಿ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ.ರುದ್ರೇಶ ಘಾಳಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಎಲ್ಲ ತಾಲೂಕುಗಳ ತಹಶೀಲ್ದಾರರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

> ಆನ್‌ಲೈನ್‌ನಲ್ಲಿ ಪಾಲಿಕೆಯ ಕೆಲಸಗಳ ಕುರಿತು ನೀಡುವ ಮಾಹಿತಿ ಮತ್ತು ನೆಲಮಟ್ಟದಲ್ಲಿ ನಡೆಯುವ ಕಾರ್ಯಗಳು ಪರಸ್ಪರ ಹೊಂದಾಣಿಕೆಯಾಗಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಅಪ್‌ಡೇಟ್ ನೀಡುವುದಕ್ಕಿಂತ ಸಾರ್ವಜನಿಕರಿಗೆ ಕಣ್ಣಿಗೆ ಕಾಣುವ ರೀತಿಯಲ್ಲಿ ಸ್ವಚ್ಛತಾ ಕಾರ್ಯ ನಡೆಯಬೇಕು. ಆಗ ಮಾತ್ರ ಪಾಲಿಕೆಯ ಕೆಲಸಗಳ ಬಗ್ಗೆ ಜನರಲ್ಲಿ ನಂಬಿಕೆ ಮೂಡುತ್ತದೆ.
>
> – ಸ್ನೇಹಲ್ ಆರ್., ಜಿಲ್ಲಾಧಿಕಾರಿ

# ತಾಲೂಕು ಕ್ರೀಡಾಕೂಟದಲ್ಲಿ ಬಿ.ಎಂ.ಎಸ್. ಶಾಲೆಯ ವಿದ್ಯಾರ್ಥಿಗಳ ಸಾಧನೆ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಬಿ.ಎಂ.ಎಸ್. ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ವಿವಿಧ ಸ್ಪರ್ಧೆ ಗಳಲ್ಲಿ ಉತ್ತಮ ಸಾಧನೆ ಮಾಡಿ ಶಾಲೆಗೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಶಿಕ್ಷಕರ ವೃಂದ ಹಾಗೂ ಆಡಳಿತ ಮಂಡಳಿ ಹರ್ಷ ವ್ಯಕ್ತಪಡಿಸಿದೆ. ಅಮನ್ ಅಹ್ಮದ್ ಗುಂಡು ಎಸೆತದಲ್ಲಿ ಪ್ರಥಮ, ಚಕ್ರ ಎಸೆತದಲ್ಲಿ ದ್ವಿತೀಯ ಹಾಗೂ ಸರಪಳಿ ಗುಂಡು ಎಸೆತದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಹಸನ್ ಕಾಗದ 200 ಮೀಟರ್ ಓಟದಲ್ಲಿ ಪ್ರಥಮ ಹಾಗೂ ಚಕ್ರ ಎಸೆತದಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಶಿವರೆಡ್ಡಿ ಕಲಕೇರಿ 400 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಶುಭಂ ಕಬಾಡಿ ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಗಂಗಾ ಕತ್ತಿ ಗುಂಡು ಎಸೆತದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಶಾಹಿಕಹ್ಮದ ಅಕ್ಕಿ ಗುಂಡು ಎಸೆತದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.

ಶಾಲೆಯ ವಿದ್ಯಾರ್ಥಿಗಳ ತಂಡ ವಾಲಿಬಾಲ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದು ಉತ್ತಮ ಪ್ರದರ್ಶನ ನೀಡಿದೆ. ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ತೋರಿದ ಸಾಧನೆಗೆ ಶಾಲೆಯ ಶಿಕ್ಷಕರು ಹಾಗೂ ಆಡಳಿತ ಮಂಡಳಿ ಅಭಿನಂದನೆ ಸಲ್ಲಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಕೈಗಾರಿಕಾ ಕೌಶಲ್ಯ: ಜಿಟಿಟಿಸಿಯಲ್ಲಿ ಇಂಟರ್ನ್‌ಶಿಪ್ ತರಬೇತಿ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಟಿಟಿಸಿ ಧಾರವಾಡ ವತಿಯಿಂದ ಜೆಎಸ್‌ಎಸ್ ಕೌಶಲ್ಯ ಐಟಿಐ ಕಾಲೇಜಿನ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಇಂಟರ್ನ್‌ಶಿಪ್ ತರಬೇತಿ ಕಾರ್ಯಕ್ರಮ ಯಶಸ್ವಿಯಾಗಿ ಪೂರ್ಣಗೊಂಡಿತು.

ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಅನುಭವ ಹಾಗೂ ಕೈಗಾರಿಕಾ ಆಧಾರಿತ ತಾಂತ್ರಿಕ ಕೌಶಲ್ಯ ಒದಗಿಸುವ ಉದ್ದೇಶದಿಂದ ತರಬೇತಿ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಕೌಶಲ್ಯ ಅಭಿವೃದ್ಧಿ ಘಟಕದ ಮುಖ್ಯಸ್ಥ ಬಸವರಾಜ ಬಿ. ಮಾತನಾಡಿ, ವಿದ್ಯಾರ್ಥಿಗಳು ಇಂತಹ ಪ್ರಾಯೋಗಿಕ ಹಾಗೂ ಕೈಗಾರಿಕಾ ಆಧಾರಿತ ತರಬೇತಿ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಂಡು ತಮ್ಮ ತಾಂತ್ರಿಕ ಕೌಶಲ್ಯವನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು. ಭವಿಷ್ಯದ ಉದ್ಯೋಗಾವಕಾಶಗಳಿಗೆ ಅಗತ್ಯವಾದ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಜಿಟಿಟಿಸಿ ಪ್ರಾಂಶುಪಾಲ ಶಿವಾನಂದ ಬಿ. ಕುಂಬಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳು, ಬೋಧಕ ಸಿಬ್ಬಂದಿ ಹಾಗೂ ಸಂಯೋಜಕರನ್ನು ಅಭಿನಂದಿಸಿದರು. ಯುವಜನರಿಗೆ ಕೌಶಲ್ಯ ಆಧಾರಿತ, ಪ್ರಾಯೋಗಿಕ ಹಾಗೂ ಕೈಗಾರಿಕಾ ಆಧಾರಿತ ತರಬೇತಿ ಒದಗಿಸುವ ಮೂಲಕ ಅವರನ್ನು ಸಬಲಗೊಳಿಸುವುದು ಮತ್ತು ಉತ್ತಮ ಉದ್ಯೋಗಾವಕಾಶಗಳಿಗೆ ಸಿದ್ಧಪಡಿಸುವುದು ಜಿಟಿಟಿಸಿ ಧಾರವಾಡದ ನಿರಂತರ ಬದ್ಧತೆಯಾಗಿದೆ ಎಂದರು.

ತರಬೇತಿಯಲ್ಲಿ CAD Design ಹಾಗೂ CNC Milling ಸೇರಿದಂತೆ ವಿವಿಧ ತಾಂತ್ರಿಕ ವಿಷಯಗಳ ಕುರಿತು ಪ್ರಾಯೋಗಿಕ ತರಬೇತಿ ನೀಡಲಾಯಿತು. ಯಂತ್ರೋಪಕರಣಗಳು ಹಾಗೂ ತಾಂತ್ರಿಕ ಪ್ರಕ್ರಿಯೆಗಳ ಕುರಿತು ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನ ಮತ್ತು ಕೈಚಳಕದ ಅನುಭವ ದೊರೆಯಿತು. ತರಬೇತಿ ಪೂರ್ಣಗೊಂಡ ಬಳಿಕ ವಿದ್ಯಾರ್ಥಿ ಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು.

ಜೆಟಿಒಗಳಾದ ಲಿಂಗರಾಜ್ ಹಾಗೂ ಶ್ರೀನಾಥ್ ಮಡಿವಾಳರ್ ಅವರು ಈ ಉಪಕ್ರಮವನ್ನು ಶ್ಲಾಘಿಸಿ, ವಿದ್ಯಾರ್ಥಿಗಳಿಗೆ ಉತ್ತಮ ತಾಂತ್ರಿಕ ತರಬೇತಿ ಅವಕಾಶ ಕಲ್ಪಿಸಿದ ಜಿಟಿಟಿಸಿ ಧಾರವಾಡಕ್ಕೆ ಧನ್ಯವಾದ ಸಲ್ಲಿಸಿದರು.

ಕಾರ್ಯಕ್ರಮವನ್ನು ಸಂಯೋಜಕ ಮಹೇಶ್ ಜಕ್ಕಳಿ ಹಾಗೂ ಎಲೆಕ್ಟ್ರಿಕಲ್ ಫ್ಯಾಕಲ್ಟಿ ಪೂಜ್ಞಾ ಸಂಯೋಜಿಸಿದರು.

## ಗಾಂಧಿ ಭವನದಲ್ಲಿ ಜಿಲ್ಲಾಮಟ್ಟದ ಕಾರ್ಯಕ್ರಮ

# ಗಾಂಧಿ ಜಯಂತಿ ಅರ್ಥಪೂರ್ಣ ಆಚರಣೆಗೆ ಸಿದ್ಧತೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಅಕ್ಟೋಬರ್ 2ರಂದು ನಡೆಯಲಿರುವ 157ನೇ ಮಹಾತ್ಮ ಗಾಂಧೀಜಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅಧಿಕಾರಿಗಳಿಗೆ ಸೂಚಿಸಿದರು.

ಧಾರವಾಡ ಹೊಸ ಬಸ್ ನಿಲ್ದಾಣದ ಸಮೀಪದ ನೂತನ ಗಾಂಧಿ ಭವನದಲ್ಲಿ ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಮಟ್ಟದ ಕಾರ್ಯಕ್ರಮ ಆಯೋಜಿಸಲಾಗಿದ್ದು, ಕಾರ್ಯಕ್ರಮ ಯಶಸ್ವಿಯಾಗುವಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಮಂಗಳವಾರ ನಡೆದ ಗಾಂಧೀಜಿ ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಾಂಧಿ ಜಯಂತಿ ಕಾರ್ಯಕ್ರಮವನ್ನು ನೂತನ ಗಾಂಧಿ ಭವನದಲ್ಲಿ ಆಯೋಜಿಸುತ್ತಿರುವ ಹಿನ್ನೆಲೆಯಲ್ಲಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಮಹಾನಗರ ಪಾಲಿಕೆ ಅಧಿಕಾರಿಗಳು ಗಾಂಧಿ ಭವನ, ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿರುವ ಗಾಂಧಿ ಪ್ರತಿಮೆ ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸಬೇಕು. ಗಾಂಧಿ ಜಯಂತಿಯಂದು ಗಾಂಧಿ ಭವನವನ್ನು ಅಲಂಕರಿಸಿ ಆಕರ್ಷಕವಾಗಿ ಸಿದ್ಧಪಡಿಸಬೇಕು ಎಂದು ಸೂಚಿಸಿದರು.

ರಜಾ ದಿನವಾಗಿರುವುದರಿಂದ ಸಾರ್ವಜನಿಕರು, ವಿದ್ಯಾರ್ಥಿಗಳು ಹಾಗೂ ಗಾಂಧಿ ವಿಚಾರಧಾರೆಯ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಗಾಂಧೀಜಿ ಪ್ರಿಯ ಭಜನೆಗಳು, ಸರ್ವಧರ್ಮ ಪ್ರಾರ್ಥನೆ ಹಾಗೂ ವಿಶೇಷ ಉಪನ್ಯಾಸ ಆಯೋಜಿಸಬೇಕು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಜಿಲ್ಲಾಮಟ್ಟದಲ್ಲಿ ನಡೆದ 'ಬಾಪೂಜಿ' ಪ್ರಬಂಧ ಸ್ಪರ್ಧೆಯಲ್ಲಿ ಪ್ರೌಢಶಾಲೆ, ಪಿಯು ಕಾಲೇಜು, ಪದವಿ ಹಾಗೂ ಸ್ನಾತಕೋತ್ತರ ವಿಭಾಗಗಳಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಗಾಂಧಿ ಭವನದಲ್ಲಿ ಮಹಾತ್ಮ ಗಾಂಧೀಜಿಯವರ ವಿಚಾರಧಾರೆ, ತತ್ವ–ಸಿದ್ಧಾಂತ ಹಾಗೂ ಜೀವನ ಚರಿತ್ರೆಯನ್ನು ಪ್ರತಿಬಿಂಬಿಸುವ ಕಾರ್ಯಕ್ರಮಗಳನ್ನು ಗಾಂಧೀಜಿ ಪ್ರಣೀತ ಸಂಘ–ಸಂಸ್ಥೆಗಳು, ಶಾಲಾ–ಕಾಲೇಜುಗಳ ಸಹಯೋಗದಲ್ಲಿ ಆಯೋಜಿಸಬೇಕು ಎಂದು ಸೂಚಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ನಸೀರಾಬಿ ಶೇಖ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಭೆಯಲ್ಲಿ ಗಾಂಧಿ ಶಾಂತಿ ಪ್ರತಿಷ್ಠಾನದ ಅಧ್ಯಕ್ಷ ಡಾ.ಸಂಜೀವ ಕುಲಕರ್ಣಿ, ಧಾರವಾಡ ತಹಶೀಲ್ದಾರ್ (ಪ್ರ) ಡಾ.ಡಿ.ಎಚ್. ಹೂಗಾರ, ಮಹಾನಗರ ಪಾಲಿಕೆಯ ವಲಯ ಸಹಾಯಕ ಆಯುಕ್ತ ಅರವಿಂದ ಜಮಖಂಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಜಿಲ್ಲಾ ಪಂಚಾಯಿತಿ ಅಧಿಕಾರಿ ಆರ್.ಎಸ್. ಕನವಳ್ಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವೀರಣ್ಣಗೌಡ ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಗಾಂಧೀಜಿ ಜಯಂತಿಯನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಅವರ ವಿಚಾರಧಾರೆ, ತತ್ವ-ಸಿದ್ಧಾಂತ ಹಾಗೂ ಜೀವನ ಮೌಲ್ಯಗಳನ್ನು ಜನರಿಗೆ ತಲುಪಿಸುವ ರೀತಿಯಲ್ಲಿ ಅರ್ಥಪೂರ್ಣವಾಗಿ ಆಚರಿಸಬೇಕು. ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಗತ್ಯ ಕ್ರಮ ಕೈಗೊಳ್ಳಿ.
>
> – ಗೀತಾ ಸಿ.ಡಿ., ಅಪರ ಜಿಲ್ಲಾಧಿಕಾರಿ

## ಸಮಾಜದ ಕಷ್ಟ-ಸುಖಗಳಿಗೆ ಸ್ಪಂದಿಸುವ ಮನೋಭಾವ ಬೆಳೆಸಿಕೊಳ್ಳಿ

# ಕೈಯಲ್ಲಿ ಪುಸ್ತಕ, ಮನದಲ್ಲಿ ಸೇವಾ ಸಂಕಲ್ಪವಿರಲಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯಾರ್ಥಿಗಳ ಕೈಯಲ್ಲಿ ಪುಸ್ತಕದ ಜತೆಗೆ ಮನದಲ್ಲಿ ಸೇವಾ ಸಂಕಲ್ಪವೂ ಇರಬೇಕು. ಸಮಾಜದೊಂದಿಗೆ ಬೆರೆತು, ಜನರ ಕಷ್ಟ–ಸುಖಗಳಿಗೆ ಸ್ಪಂದಿಸುವ ಮನೋಭಾವ ಬೆಳೆಸಿಕೊಂಡಾಗ ಮಾತ್ರ ಶಿಕ್ಷಣಕ್ಕೆ ನಿಜವಾದ ಅರ್ಥ ದೊರೆಯುತ್ತದೆ ಎಂದು ಶಿವಯೋಗಿ ಹಾವೇರಿ ಹೇಳಿದರು.ಪಟ್ಟಣದ ಶ್ರೀ ಅನ್ನದಾನೇಶ್ವರ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ಆಯೋಜಿಸಿದ್ದ ಎನ್‌ಎಸ್‌ಎಸ್ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನ ಕೇವಲ ಅಂಕ, ಪದವಿ ಹಾಗೂ ಉದ್ಯೋಗದ ಸಿದ್ಧತೆಗೆ ಸೀಮಿತವಾಗಬಾರದು.

ಅದು ವ್ಯಕ್ತಿತ್ವ ರೂಪಿಸಿಕೊಳ್ಳುವ ಅಮೂಲ್ಯ ಕಾಲಘಟ್ಟ. ತರಗತಿಯ ನಾಲ್ಕು ಗೋಡೆಗಳೊಳಗೆ ಕಲಿಯುವ ಜ್ಞಾನದ ಜತೆಗೆ ಸಮಾಜದ ವಾಸ್ತವ ಬದುಕನ್ನು ಅರಿಯಬೇಕು.

ಗ್ರಾಮೀಣ ಪ್ರದೇಶಗಳ ಸಮಸ್ಯೆಗಳನ್ನು ತಿಳಿದುಕೊಂಡು, ಸಾಧ್ಯವಾದಷ್ಟು ಜನರ ಬದುಕಿಗೆ ನೆರವಾಗುವ ಮನೋಭಾವ ಬೆಳೆಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಚೇರ್ಮನ್ ಎಸ್.ಎ. ಪಾಟೀಲ ಮಾತನಾಡಿ, ತಮ್ಮ ಕಾಲೇಜು ಜೀವನದಲ್ಲಿ ಎನ್‌ಎಸ್‌ಎಸ್‌ನಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಳ್ಳಲು ಸಾಧ್ಯವಾಗದಿರುವುದು ಇಂದು ನೆನಪಾಗುತ್ತಿದೆ. ಆದರೆ ಪ್ರಸ್ತುತ ವಿದ್ಯಾರ್ಥಿಗಳಿಗೆ ಸೇವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಉತ್ತಮ ಅವಕಾಶಗಳಿವೆ ಎಂದರು.

ಕಾಲೇಜಿನ ಪ್ರಾಚಾರ್ಯ ಡಾ. ಕಲ್ಲಯ್ಯ ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜತೆಗೆ ಸಮಾಜಮುಖಿ ಚಟುವಟಿಕೆಗಳಲ್ಲೂ ತೊಡಗಿಸಿಕೊಳ್ಳಬೇಕು. ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಎನ್‌ಎಸ್‌ಎಸ್ ಚಟುವಟಿಕೆಗಳು ಪೂರಕವಾಗಿದ್ದು, ಕಾಲೇಜಿನ ವತಿಯಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದರು.

ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ರಾಮಚಂದ್ರ ಜೆ. ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿದ್ಯಾರ್ಥಿನಿ ಪ್ರಗತಿ ಪ್ರಾರ್ಥಿಸಿದರು. ಐಶ್ವರ್ಯ ಎಂ. ರಾಠೋಡ ಪರಿಚಯಿಸಿದರು. ವಿದ್ಯಾಶ್ರೀ ಪೂಜಾರ್ ಹಾಗೂ ರಿಹಾನ್ ನಿರೂಪಿಸಿದರು. ಶ್ವೇತಾ ನೀರಲೋಟಿ ವಂದಿಸಿದರು.

ಡಾ. ಡಿ.ಎಲ್. ಪವಾರ, ಪುಂಡಲೀಕ ಮಾದರ, ಡಾ. ಸಂದೀಪಕುಮಾರ ಕೆ., ಡಾ. ಸಂದೀಪಕುಮಾರ ಬಿ., ಡಾ. ಆರ್.ಆರ್. ಪಾಟೀಲ, ಭರತರಾಜ ಬಳ್ಳಾರಿ, ಡಾ. ಋಷಿಕೇಶ ಪವಾರ, ಡಾ. ನಿರುಪಾಧಿ, ಎಸ್.ಬಿ. ಗೌಡರ ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> ಸಮಾಜದೊಂದಿಗೆ ಬೆರೆತು, ಜನರ ಕಷ್ಟ-ಸುಖಗಳಿಗೆ ಸ್ಪಂದಿಸುವ ಮನೋಭಾವ ಬೆಳೆಸಿಕೊಂಡಾಗ ಮಾತ್ರ ಶಿಕ್ಷಣಕ್ಕೆ ನಿಜವಾದ ಅರ್ಥ ದೊರೆಯುತ್ತದೆ.
>
> – ಶಿವಯೋಗಿ ಹಾವೇರಿ

### ಆರು ಸ್ಥಾನಗಳಿಗೆ ಏಳು ಅಭ್ಯರ್ಥಿಗಳ ನಡುವೆ ಸ್ಪರ್ಧೆ

# ಇಂದು ಕದಡಿ ಪಿಕೆಪಿಎಸ್ ನಿರ್ದೇಶಕರ ಚುನಾವಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಕದಡಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ (ಪಿಕೆಪಿಎಸ್) ಆಡಳಿತ ಮಂಡಳಿ ನಿರ್ದೇಶಕರ ಆಯ್ಕೆಗೆ ಸೆ.27ರಂದು ಭಾನುವಾರ ಬೆಳಗ್ಗೆ 9ರಿಂದ ಸಂಜೆ 4ರವರೆಗೆ ಚುನಾವಣೆ ನಡೆಯಲಿದೆ.

ಸಂಘದ ಒಟ್ಟು 108 ಸಾಲಗಾರರು ಹಾಗೂ 247 ಬಿನ್‌ಸಾಲಗಾರರು ಮತದಾರರಾಗಿದ್ದು, ಸಾಲಗಾರರ ಕ್ಷೇತ್ರದಿಂದ 11 ಹಾಗೂ ಬಿನ್‌ಸಾಲಗಾರರ ಕ್ಷೇತ್ರದಿಂದ ಒಬ್ಬ ನಿರ್ದೇಶಕರನ್ನು ಆಯ್ಕೆ ಮಾಡಬೇಕಿದೆ.

ಸಾಲಗಾರರ ಕ್ಷೇತ್ರದ ಐದು ಸ್ಥಾನಗಳಿಗೆ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದು, ಉಳಿದ ಐದು ಸಾಮಾನ್ಯ ಸ್ಥಾನಗಳಿಗೆ ಆರು ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಬಿನ್‌ಸಾಲಗಾರರ ಕ್ಷೇತ್ರದ ಒಂದು ಸ್ಥಾನಕ್ಕೆ ಇಬ್ಬರು ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದಾರೆ. ಹೀಗಾಗಿ ಒಟ್ಟು ಆರು ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

ಸಾಲಗಾರರ ಮಹಿಳಾ ಕ್ಷೇತ್ರದಿಂದ ಯಲ್ಲವ್ವ ಭೀರಪ್ಪ ಗುಡಿಸಗಾರ ಹಾಗೂ ಲಲಿತಾ ಬಸವರಾಜ ಮುದರಡ್ಡಿ, ಹಿಂದುಳಿದ ವರ್ಗ 'ಎ' ಕ್ಷೇತ್ರದಿಂದ ಹನಮಪ್ಪ ಶೇಖರಪ್ಪ ಕಂಬಳಿ, ಹಿಂದುಳಿದ ವರ್ಗ 'ಬಿ' ಕ್ಷೇತ್ರದಿಂದ ರಾಮನಗೌಡ ಬಸನಗೌಡ ಪಾಟೀಲ, ಪರಿಶಿಷ್ಟ ಜಾತಿ ಕ್ಷೇತ್ರದಿಂದ ಹನಮಂತ ಶಂಕ್ರಪ್ಪ ಸಾಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಾಲಗಾರರ ಸಾಮಾನ್ಯ ಕ್ಷೇತ್ರದಲ್ಲಿ ಮಂಜುನಾಥ ಬ. ಚಿಕ್ಕನಗೌಡರ, ವಿಕ್ರಮ ವಸಂತ ಗೊಜನೂರು, ವೀರಭದ್ರಯ್ಯ ಕ. ಸಾಲಿಮಠ, ಶಂಕ್ರಪ್ಪ ಸೋಮಪ್ಪ ಮುದರಡ್ಡಿ, ಹನಮಪ್ಪ ಹೊನ್ನಕೇರಪ್ಪ ಗಡಾದವರ ಹಾಗೂ ಮತ್ತೊಬ್ಬ ಅಭ್ಯರ್ಥಿ ಸೇರಿದಂತೆ ಆರು ಮಂದಿ ಕಣದಲ್ಲಿದ್ದಾರೆ.

ಬಿನ್‌ಸಾಲಗಾರರ ಕ್ಷೇತ್ರದಲ್ಲಿ ಪ್ರವೀಣ ಡಿ. ದಳವಾಯಿ ಹಾಗೂ ಬಸವರಾಜ ಭರಮಪ್ಪ ಕೊಂಗವಾಡ ಸ್ಪರ್ಧಿಸುತ್ತಿದ್ದಾರೆ.

ರಿಟರ್ನಿಂಗ್ ಅಧಿಕಾರಿ ಎನ್.ಆರ್. ಜಕಾತಿ ಅವರ ಅನುಪಸ್ಥಿತಿಯಲ್ಲಿ ಬಸವರಾಜ ನಿಡಗುಂದಿ ಈ ಮಾಹಿತಿ ತಿಳಿಸಿದ್ದಾರೆ.

### ಹಾಲಿ-ಮಾಜಿ ಶಾಸಕರು ಭಾಗಿ; ಕೇಸರಿ ರಂಗಿನಲ್ಲಿ ಮಿಂದೆದ್ದ ಪಟ್ಟಣ

# ಹಿಂದೂ ಮಹಾಗಣಪತಿ ವಿಜೃಂಭಣೆಯ ವಿಸರ್ಜನೆ






**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಬೃಹತ್ ಹಿಂದೂ ಮಹಾಗಣಪತಿ ವಿಸರ್ಜನಾ ಮೆರವಣಿಗೆ ಶುಕ್ರವಾರ ಸಂಭ್ರಮ-ಸಡಗರ, ಭಕ್ತಿ-ಉತ್ಸಾಹದೊಂದಿಗೆ ಅದ್ಧೂರಿಯಾಗಿ ನಡೆಯಿತು. ಬೆಳಗ್ಗೆ 11 ಗಂಟೆಗೆ ಆರಂಭವಾದ ಮೆರವಣಿಗೆ ರಾತ್ರಿ 8.30ರವರೆಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಾಗಿದ್ದು, ಕೊನೆಗೆ ತುಂಗಭದ್ರ ನದಿಯಲ್ಲಿ ಗಣಪತಿ ಮೂರ್ತಿಯ ವಿಸರ್ಜನೆ ನೆರವೇರಿಸಲಾಯಿತು.

ರಾಮನಗರದ ತೇರು ಬೀದಿ, ಕೂಡ್ಲಿಗಿ ಸರ್ಕಲ್, ಕೊಟ್ಟೂರು ಸರ್ಕಲ್, ಬೈಪಾಸ್ ಸರ್ಕಲ್, ಬಸವೇಶ್ವರ ವೃತ್ತ ಸೇರಿದಂತೆ ಹಳೆಯ ಹಗರಿಬೊಮ್ಮನಹಳ್ಳಿಯ ತಂಬ್ರಹಳ್ಳಿ ಸರ್ಕಲ್ ಮೂಲಕ ಸಾಗಿದ ಮೆರವಣಿಗೆಯ ದಾರಿಯುದ್ದಕ್ಕೂ ಸಾವಿರಾರು ಭಕ್ತರು ಸಾಕ್ಷಿಯಾದರು. ಮಹಿಳೆಯರು, ಮಕ್ಕಳು, ಯುವಕರು ಹಾಗೂ ವೃದ್ಧರು ಸೇರಿದಂತೆ ಅಪಾರ ಸಂಖ್ಯೆಯ ಜನರು ಪಾಲ್ಗೊಂಡು ಗಣಪತಿಗೆ ಭಕ್ತಿಯ ನಮನ ಸಲ್ಲಿಸಿದರು.

**ಕಹಳೆ-ತಮಟೆಯ ಸದ್ದು; ಡಿಜೆ ತಾಳಕ್ಕೆ ಯುವಕರ ಕುಣಿತ**

ಮೆರವಣಿಗೆಯುದ್ದಕ್ಕೂ ಕಹಳೆ, ವಾದ್ಯ, ತಮಟೆ ಸೇರಿದಂತೆ ವಿವಿಧ ಸಂಗೀತ ಪರಿಕರಗಳ ನಾದ ಮೊಳಗಿತು. ಹೂವಿನ ಮಳೆ, ಬಣ್ಣಬಣ್ಣದ ಕಾಗದದ ತುಂಡುಗಳ ಸುರಿಮಳೆ ಹಾಗೂ ಡಿಜೆ ಸಂಗೀತದ ಸದ್ದಿಗೆ ಯುವಕರು ಹೆಜ್ಜೆ ಹಾಕಿ ಸಂಭ್ರಮಿಸಿದರು.

ಹಿಂದೂ ಯುವಕರು ಕೇಸರಿ ಶಾಲು ಧರಿಸಿ, ಹಣೆಯ ಮೇಲೆ ಕುಂಕುಮವಿಟ್ಟು ಮೆರವಣಿಗೆಯಲ್ಲಿ ಪಾಲ್ಗೊಂಡು ಭಕ್ತಿಭಾವ ಮೆರೆದರು. ಭವ್ಯವಾಗಿ ಅಲಂಕರಿಸಲಾಗಿದ್ದ ಹಿಂದೂ ಮಹಾಗಣಪತಿ ಮೂರ್ತಿಯನ್ನು ಮಹಾರಾಜನಂತೆ ಮೆರವಣಿಗೆಯಲ್ಲಿ ಕೊಂಡೊಯ್ಯಲಾಯಿತು.

ಮೆರವಣಿಗೆಯ ದಾರಿಯುದ್ದಕ್ಕೂ ಭಕ್ತರಿಗಾಗಿ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಟ್ರ್ಯಾಕ್ಟರ್‌ನಲ್ಲಿ ಸಿದ್ಧಪಡಿಸಿದ್ದ ಪ್ರಸಾದವನ್ನು ಭಕ್ತರಿಗೆ ವಿತರಿಸಲಾಯಿತು. ಪ್ರಮುಖ ಸ್ಥಳಗಳಲ್ಲಿ ಜನದಟ್ಟಣೆ ಕಂಡುಬಂದಿದ್ದು, ಮೆರವಣಿಗೆ ಸಾಗುವ ಮಾರ್ಗದ ಇಕ್ಕೆಲಗಳಲ್ಲಿ ಜನರು ಕಿಕ್ಕಿರಿದು ನಿಂತಿದ್ದರು.

**ಹಾಲಿ-ಮಾಜಿ ಶಾಸಕರ ಭಾಗಿ**

ವಿಸರ್ಜನಾ ಕಾರ್ಯಕ್ರಮದಲ್ಲಿ ಶಾಸಕ ಕೆ. ನೇಮಿರಾಜ ನಾಯ್ಕ, ಮಾಜಿ ಶಾಸಕ ಎಸ್. ಭೀಮಾನಾಯ್ಕ, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಬದಾಮಿ ಮೃತ್ಯುಂಜಯ, ಜಿಎಂ ಜಗದೀಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿ ಗೋಣಿಬಸಪ್ಪ, ಚಿಂತಪ್ಪಳ್ಳಿ ದೇವೇಂದ್ರಪ್ಪ, ಸೆರಗಾರ್ ಹುಚ್ಚಪ್ಪ ಸೇರಿದಂತೆ ವಿವಿಧ ಮುಖಂಡರು ಭಾಗವಹಿಸಿದ್ದರು.

ಪೊಲೀಸ್ ಇಲಾಖೆಯಿಂದಲೂ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿತ್ತು. ಡಿವೈಎಸ್ಪಿ ಮಲ್ಲೇಶ್ ನಾಯ್ಕ ದೊಡ್ಡಮನಿ, ಸಿಪಿಐ ವಿಕಾಸ್ ಲಮಾಣಿ, ಸಬ್‌ಇನ್‌ಸ್ಪೆಕ್ಟರ್ ನಾಗರತ್ನ ಹಾಗೂ ಗೃಹರಕ್ಷಕ ದಳದ ಸಿಬ್ಬಂದಿ ಸೇರಿದಂತೆ ನೂರಾರು ಪೊಲೀಸರನ್ನು ಶಾಂತಿ-ಸುವ್ಯವಸ್ಥೆಗಾಗಿ ನಿಯೋಜಿಸಲಾಗಿತ್ತು.

> **ವಿಸರ್ಜನೆಗೆ ಕಾರ್ಯಕರ್ತರ ಸಾಥ್**
>
> ನ್ಯಾಯವಾದಿ ಚಂದ್ರಶೇಖರ, ಬಾದಾಮಿ ನಟರಾಜ್, ಸುಣ್ಣದ ಗುರು ಬಸವರಾಜ್, ತ್ಯಾವಣಗಿ ಕೊಟ್ರೇಶ್, ಚಿಂತಪ್ಪಳ್ಳಿ ತಳವಾರ್ ನಾಗರಾಜ, ರಾಘವೇಂದ್ರ, ಸಂಪತ್ ಮೂರ್ತಿ ಸೇರಿದಂತೆ ಹಿಂದೂ ಮಹಾಗಣಪತಿ ಪ್ರಮುಖ ಕಾರ್ಯಕರ್ತರು ವಿಸರ್ಜನಾ ಮೆರವಣಿಗೆಯ ಯಶಸ್ಸಿಗೆ ಸಕ್ರಿಯವಾಗಿ ಶ್ರಮಿಸಿದರು. ಭಕ್ತಿ-ಸಂಭ್ರಮದ ನಡುವೆ ನಡೆದ ಭವ್ಯ ಮೆರವಣಿಗೆ ಹಗರಿಬೊಮ್ಮನಹಳ್ಳಿಯಲ್ಲಿ ಗಮನ ಸೆಳೆಯಿತು.

# ಇಂದು ಬಸವದಳದ ವಾರ್ಷಿಕ ಮಹಾಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**

ಬಸವದಳ ಗದಗ-ಬೆಟಗೇರಿ ವತಿಯಿಂದ 2025-26ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಮಹಾಸಭೆಯನ್ನು ಸೆಪ್ಟೆಂಬರ್ 27ರಂದು ಬೆಳಿಗ್ಗೆ 11 ಗಂಟೆಗೆ ಶಿವಾನಂದ ನಗರದ ಶರಣ ಜಿ.ಕೆ. ಹೆರಕಲ್ಲ ಸಭಾ ವೇದಿಕೆ, ಬಸವದಳದ ಬಸವ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ.

ಬಸವದಳದ 1717ನೇ ಶರಣ ಸಂಗಮದ ಅಂಗವಾಗಿ ನಡೆಯಲಿರುವ ಸಭೆಯ ಅಧ್ಯಕ್ಷತೆಯನ್ನು ಬಸವದಳ ಗದಗ-ಬೆಟಗೇರಿ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸಲಿದ್ದಾರೆ.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ಬಸವದಳದ ಕಾರ್ಯಾಧ್ಯಕ್ಷ ಪ್ರಕಾಶ ಅಸುಂಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತ್ರೋಬಾಲ್‌ನಲ್ಲಿ ಪ್ರಥಮ; ಜಿಲ್ಲಾ ಮಟ್ಟಕ್ಕೆ ಪಿಎಂಶ್ರೀ ಶಾಲೆ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಗದಗ ಗ್ರಾಮೀಣ ವಲಯದ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಮುಳಗುಂದದ ಪಿಎಂಶ್ರೀ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ (ಡಿಪಿಇಪಿ)ಯ 14 ವರ್ಷದೊಳಗಿನ ಬಾಲಕರ ತ್ರೋಬಾಲ್ ತಂಡ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದೆ.

ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಗಳಿಸುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ.

ತಂಡದ ಈ ಸಾಧನೆಗೆ ಶಾಲೆಯ ಶಿಕ್ಷಕರ ವೃಂದ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ.

### ಬಾಲಕಿಯರ ವಾಲಿಬಾಲ್, ಬಾಲಕರ ರಿಲೇ ತಂಡ ಜಿಲ್ಲಾ ಮಟ್ಟಕ್ಕೆ ಆಯ್ಕೆ

# ಇನಾಮತಿ ಶಾಲೆಯ ಕ್ರೀಡಾಪಟುಗಳ ಭರ್ಜರಿ ಸಾಧನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕು ಮಟ್ಟದ ಗ್ರಾಮೀಣ ವಲಯದ ಕ್ರೀಡಾಕೂಟದಲ್ಲಿ ಕುರ್ತಕೋಟಿಯ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಎಂ.ಎ. ಇನಾಮತಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದು, ಬಾಲಕಿಯರ ವಾಲಿಬಾಲ್ ಹಾಗೂ ಬಾಲಕರ ರಿಲೇ ತಂಡಗಳು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿವೆ.

ಗದುಗಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಇತ್ತೀಚೆಗೆ ನಡೆದ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಶಾಲೆಯ ವಿದ್ಯಾರ್ಥಿಗಳು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಉತ್ತಮ ಪ್ರದರ್ಶನ ನೀಡಿ ಹಲವು ಸ್ಥಾನಗಳನ್ನು ಪಡೆದುಕೊಂಡಿದ್ದಾರೆ.

14 ವರ್ಷದೊಳಗಿನವರ ವಿಭಾಗದಲ್ಲಿ ಅಮೃತ ಹುಡೇದ ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಲಕ್ಷ್ಮಿ ಪೂಜಾರ್ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಗುಂಡು ಎಸೆತ ಹಾಗೂ ಹರ್ಡಲ್ಸ್ ಓಟದಲ್ಲೂ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಪ್ರೌಢ ವಿಭಾಗದಲ್ಲಿ ಸವಿತಾ ಕಾಬಳ್ಳಿ ಗುಂಡು ಎಸೆತ ಹಾಗೂ ಜಾವೆಲಿನ್ ಎಸೆತದಲ್ಲಿ ದ್ವಿತೀಯ ಸ್ಥಾನ, ಸರಪಳಿ ಗುಂಡು ಎಸೆತದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಸಂಜನಾ ಪ್ರಭಯ್ಯನಮಠ ಸರಪಳಿ ಗುಂಡು ಎಸೆತದಲ್ಲಿ ದ್ವಿತೀಯ ಹಾಗೂ ಚಕ್ರ ಎಸೆತದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.

ಬಾಲಕಿಯರ ವಾಲಿಬಾಲ್ ತಂಡ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದೆ. ತಂಡದಲ್ಲಿ ಸವಿತಾ ಕಾಬಳ್ಳಿ, ಸಿಂಧು, ಶಮಬಾನು, ಶಿಫಾಬಾನು, ಮಾಬೂಬಿ ಹಾಗೂ ನೇತ್ರಾ ಸೇರಿದಂತೆ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ಆನಂದ ಅಸುಂಡಿ ಎತ್ತರ ಜಿಗಿತದಲ್ಲಿ ಪ್ರಥಮ ಹಾಗೂ ಉದ್ದ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಇರ್ಫಾನ್ ಅಣ್ಣಿಗೇರಿ ಎತ್ತರ ಜಿಗಿತದಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಚೇತನ್ ಉಗಲಾಟ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ವಿನೋದ್ ತಂತ್ರಿ ಸರಪಳಿ ಗುಂಡು ಎಸೆತದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದು, ಮುಸ್ತಾಕ ಹಣಗಿ 400 ಮೀಟರ್ ಹರ್ಡಲ್ಸ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ರಿಲೇ ಓಟದಲ್ಲಿ ಪ್ರಥಮ ಸ್ಥಾನ ಪಡೆದ ತಂಡದಲ್ಲಿ ಕಾರ್ತಿಕ್ ಇಳಗೇರ, ಚೇತನ್ ಉಗಲಾಟ, ಮುಸ್ತಾಕ ಹಣಗಿ ಹಾಗೂ ತರುಣ್ ಜಕ್ಕಲಿ ಭಾಗವಹಿಸಿದ್ದರು.

ವಿದ್ಯಾರ್ಥಿಗಳ ಈ ಸಾಧನೆಗೆ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಆರ್.ಎಂ. ಮೂಲಿಮನಿ, ಆಡಳಿತಾಧಿಕಾರಿ ಆರ್.ಎಸ್. ಪಾಟೀಲ, ಸ್ಥಾನಿಕ ಆಡಳಿತ ಮಂಡಳಿ ಅಧ್ಯಕ್ಷ ಯು.ವಿ. ಬೆಟಗೇರಿ, ಸದಸ್ಯ ಅಪ್ಪಣ್ಣ ಸಾಹುಕಾರ್ ಇನಾಮತಿ, ಶಾಲೆಯ ಮುಖ್ಯೋಪಾಧ್ಯಾಯ ಜಂಬುನಾಥ ಹರಿವಾಣ, ದೈಹಿಕ ಶಿಕ್ಷಕ ಮಂಜುನಾಥ ಅಂಗಡಿ ಹಾಗೂ ಶಾಲೆಯ ಎಲ್ಲ ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದಾರೆ.

### ಶೇರುದಾರರಿಗೆ ಶೇ.12 ಡಿವಿಡೆಂಡ್

# ನೀಲಕಂಠೇಶ್ವರ ಸಹಕಾರಿಗೆ 18ರ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಕಳೆದ 18 ವರ್ಷಗಳಿಂದ ನೇಕಾರರು, ಕಾರ್ಮಿಕರು, ರೈತರು ಹಾಗೂ ವ್ಯಾಪಾರಸ್ಥರಿಗೆ ಉತ್ತಮ ಹಣಕಾಸಿನ ಸೇವೆ ನೀಡುತ್ತ ಪ್ರಗತಿಯಲ್ಲಿರುವ ಶ್ರೀ ನೀಲಕಂಠೇಶ್ವರ ಪತ್ತಿನ ಸೌಹಾರ್ದ ಸಹಕಾರಿ ತನ್ನ 2025-26ನೇ ಸಾಲಿನ 18ನೇ ವರ್ಷದ ವಾರ್ಷಿಕ ಸರ್ವಸಾಧಾರಣ ಸಭೆಯನ್ನು ನಡೆಸಿತು. ಸಂಸ್ಥಾಪಕ ಹಾಗೂ ಹಾಲಿ ಅಧ್ಯಕ್ಷ ಮಲ್ಲಿಕಾರ್ಜುನ ಐಲಿ ಅವರ ಮಾರ್ಗದರ್ಶನದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಸ್ಥೆಯ ಆರಂಭ, ಉದ್ದೇಶ ಹಾಗೂ ಇದುವರೆಗಿನ ಪ್ರಗತಿ ಕುರಿತು ವಿವರಿಸಿದರು.ಮುಂದಿನ ದಿನಗಳಲ್ಲಿ ಶೇರುದಾರರಿಗೆ ಗ್ರೂಪ್ ಇನ್ಶೂರೆನ್ಸ್ ಹಾಗೂ ಯಶಸ್ವಿನಿ ಯೋಜನೆ ಸೌಲಭ್ಯ ಕಲ್ಪಿಸುವುದಾಗಿ ಅವರು ತಿಳಿಸಿದರು. ಶೇರುದಾರರ ಮಕ್ಕಳಿಗೆ ಶೈಕ್ಷಣಿಕ ಪುರಸ್ಕಾರ ನೀಡುವ ಯೋಜನೆಯನ್ನೂ ಪ್ರಕಟಿಸಿದ ಅವರು, ಶೇರುದಾರರಿಗೆ ಶೇ.12ರಷ್ಟು ಡಿವಿಡೆಂಡ್ ನೀಡುವುದಾಗಿ ಘೋಷಿಸಿದರು.

ಸಂಸ್ಥೆಯ ಉಪಾಧ್ಯಕ್ಷ ಆರ್.ಎನ್. ತುಕ್ಕಾರ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಕಾರ್ಯದರ್ಶಿ ನಾರಾಯಣಪ್ಪ ಮಾಳಗಿ ಸಂಸ್ಥೆಯ ಲಾಭ-ಹಾನಿ ಪತ್ರಿಕೆ ಹಾಗೂ ವಾರ್ಷಿಕ ವರದಿ ಮಂಡಿಸಿದರು.

ನಿರ್ದೇಶಕರಾದ ದೇವೇಂದ್ರಪ್ಪ ಗೋಟೂರ, ಶಂಕರ ಕಾಕಿ ಹಾಗೂ ರಾಮಣ್ಣ ಕೆಂಚಗುಂಡಿ ಸಂಸ್ಥೆಯ ಪ್ರಗತಿ ಕುರಿತು ಮಾತನಾಡಿದರು. ಇದೇ ಸಂದರ್ಭದಲ್ಲಿ ಸಂಸ್ಥೆಯ ಉತ್ತಮ ಗ್ರಾಹಕರನ್ನು ಸನ್ಮಾನಿಸಲಾಯಿತು.

ನಿರ್ದೇಶಕ ಈಶ್ವರ ಸಮಗಂಡಿ ಕಾರ್ಯಕ್ರಮ ನಿರೂಪಿಸಿದರು. ವಾಸಪ್ಪ ಜೋಗಿ ವಂದಿಸಿದರು. ನಿರ್ದೇಶಕರಾದ ವಾಸಪ್ಪ ಬುಟ್ಟಾ, ಚಂದ್ರಶೇಖರ ಶ್ಯಾವಿ, ಬಸವರಾಜ ಗಣಪಾ, ಬಸವರಾಜ ಬುಟ್ಟಾ ಸೇರಿದಂತೆ ನೂರಾರು ಶೇರುದಾರರು ಹಾಗೂ ಸದಸ್ಯರು ಸಭೆಯಲ್ಲಿ ಪಾಲ್ಗೊಂಡಿದ್ದರು.

> ಎಲ್ಲ ಶೇರುದಾರರು ಸಂಸ್ಥೆಯಲ್ಲಿ ಹೆಚ್ಚಿನ ಷೇರು ಪಡೆದುಕೊಳ್ಳುವುದರ ಜೊತೆಗೆ ಸಾಲ ಸೌಲಭ್ಯ ಹಾಗೂ ಇತರ ಬ್ಯಾಂಕಿಂಗ್ ವ್ಯವಹಾರಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸಂಸ್ಥೆಯ ಸೌಲಭ್ಯಗಳ ಲಾಭ ಪಡೆಯಬೇಕು.
>
> – ಮಲ್ಲಿಕಾರ್ಜುನ ಐಲಿ, ಅಧ್ಯಕ್ಷರು

### ಸಾಹಿತ್ಯ, ಸಂಗೀತ ಕ್ಷೇತ್ರಕ್ಕೆ ಅವರ ಕೊಡುಗೆ ಅಪಾರ: ಡಾ. ಸಿದ್ಧರಾಮ ಸ್ವಾಮಿಗಳು

# ಪುಟ್ಟರಾಜ ಕವಿ ಗವಾಯಿಗಳಿಗೆ ನುಡಿ-ಸ್ವರ ನಮನ



**ವಿಜಯಸಾಕ್ಷಿ ಸುದ್ದಿ, ಗದಗ**

ಪಂ. ಪುಟ್ಟರಾಜ ಕವಿ ಗವಾಯಿಗಳು ಅಂಧ, ಅನಾಥರಿಗೆ ಆಶ್ರಯದಾತರಾಗಿ, ಸಾಹಿತ್ಯ, ಸಂಗೀತ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಅಪಾರ ಕೊಡುಗೆ ನೀಡಿದ ಮಹಾತ್ಮರು ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2816ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಪುಟ್ಟರಾಜ ಕವಿ ಗವಾಯಿಗಳು ವಾರ್ಧಕ್ಯ ಷಟ್ಪದಿ ಸೇರಿದಂತೆ ಹಲವು ಅಮೂಲ್ಯ ಕೃತಿಗಳನ್ನು ರಚಿಸಿದ್ದಾರೆ. ಹಿಂದಿ ಸೇರಿದಂತೆ ವಿವಿಧ ಭಾಷೆಗಳಲ್ಲಿ ನಿರಂತರ 12 ವರ್ಷಗಳ ಕಾಲ ರಚಿಸಿದ ಬಸವಪುರಾಣ ಇಡೀ ದೇಶಕ್ಕೆ ನೀಡಿದ ಮಹತ್ವದ ಕೊಡುಗೆಯಾಗಿದೆ ಎಂದರು.

ಅಂಧ, ಅನಾಥ ಮಕ್ಕಳಿಗೆ ಶಿಕ್ಷಣ ಹಾಗೂ ಸಂಗೀತದ ಬೆಳಕು ನೀಡಿದ ಅವರು, ಭಿಕ್ಷೆ ಬೇಡಿ ಜೀವನ ಸಾಗಿಸುತ್ತಿದ್ದ ಅನೇಕರ ಕೈಗೆ ತಂಬೂರಿ ನೀಡಿ ಸಂಗೀತ ಸಾಧನೆಗೆ ಪ್ರೇರೇಪಿಸಿದರು. ತ್ರಿಕಾಲ ಪೂಜಾ ನಿಷ್ಠೆ, ಲಿಂಗಾಂಗ ಸಾಮರಸ್ಯದ ಮೂಲಕ ಪರಶಿವನ ಆರಾಧನೆ ಮಾಡುತ್ತಾ ತಾವೇ ಶಿವಯೋಗಿಯಾಗಿ ಬದುಕಿದ ಮಹಾತ್ಮರು ಎಂದು ಬಣ್ಣಿಸಿದರು.

ಪಂಡಿತ ಕಾಶಿನಾಥ ಶಾಸ್ತ್ರಿ ಅಡ್ನೂರ ಮಾತನಾಡಿ, ಪಂ. ಪುಟ್ಟರಾಜ ಕವಿ ಗವಾಯಿಗಳು ಈ ನಾಡು ಕಂಡ ನಡೆದಾಡುವ ದೇವರು. ಸಾಹಿತ್ಯ, ಸಂಗೀತ, ನಾಟಕ, ಕಲೆ ಸೇರಿದಂತೆ ವಿವಿಧ ಕ್ಷೇತ್ರಗಳ ಪ್ರತಿಭೆಗಳಿಗೆ ಶಕ್ತಿ ತುಂಬಿದ ಅವರು, ಸಾವಿರಾರು ಪ್ರತಿಭೆಗಳು ಸಾಧನೆ ಮಾಡಲು ಆಶೀರ್ವಾದ ನೀಡಿದರು ಎಂದರು.

ಕಾರ್ಯಕ್ರಮದ ಆರಂಭದಲ್ಲಿ ಖ್ಯಾತ ರೇಡಿಯಾಲಜಿಸ್ಟ್ ಡಾ. ಅದ್ವೈತ ಶಿವಪುರ ಅವರ ಕೊಳಲು ವಾದನ, ಸಂಗೀತ ಸಾಧಕ ವೀರೇಶ ಕಿತ್ತೂರ ಅವರ ಸ್ವರ ನಮನ ನಡೆಯಿತು. ಖ್ಯಾತ ವಯಲಿನ್ ವಾದಕ ಡಾ. ನಾರಾಯಣ ಹಿರೇಕೊಳಚಿ ಹಾಗೂ ತಬಲಾ ವಾದಕ ಡಾ. ಹನುಮಂತ ಪಡಗಾನೂರ ಅವರ ವಯಲಿನ್-ತಬಲಾ ಜುಗಲ್‌ಬಂದಿ ಭಕ್ತರನ್ನು ಮಂತ್ರಮುಗ್ಧರನ್ನಾಗಿಸಿತು.

ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಪಂಚಾಕ್ಷರಿ ಗವಾಯಿಗಳು ಅಣ್ಣಿಗೇರಿ ಅವರಿಗೆ ಹಾರ್ಮೋನಿಯಂ ಸೇವೆಯನ್ನು ಗುರುತಿಸಿ ಕರ್ನಾಟಕ ಸರ್ಕಾರ ಕರ್ನಾಟಕ ಕಲಾಶ್ರೀ ಪ್ರಶಸ್ತಿ ಪ್ರದಾನ ಮಾಡಿದ ಹಿನ್ನೆಲೆಯಲ್ಲಿ ಅವರನ್ನು ಪೂಜ್ಯರ ಸಮ್ಮುಖದಲ್ಲಿ ಗೌರವಿಸಲಾಯಿತು.

ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ವಚನ ಸಂಗೀತ, ಮಹೇಶ ಪುರಾಣಿಮಠ ಧರ್ಮಗ್ರಂಥ ಪಠಣ ಹಾಗೂ ಮಹಾಂತೇಶ ಪುರಾಣಿಮಠ ವಚನ ಚಿಂತನ ನಡೆಸಿಕೊಟ್ಟರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಸ್ವಾಗತಿಸಿದರು. ವಿದ್ಯಾ ಗಂಜಿಹಾಳ ನಿರೂಪಿಸಿದರು. ಬನ್ನಿಕೊಪ್ಪದ ಬಸವಣ್ಣೆಮ್ಮ ಶಿವಪ್ಪ ನಡಮನಿ ಹಾಗೂ ಸಿಂದಗಿಯ ದಯಾನಂದ ಬಿರಾದಾರ ದಾಸೋಹ ಸೇವೆ ವಹಿಸಿದ್ದರು. ಶಿವಪ್ಪ ಯರಾಸಿ ಸೇರಿದಂತೆ ಪ್ರಭು ಗಂಜಾಳ, ಆದೇಶ ಅಂಗಡಿ, ಸೋಮು ಪುರಾಣಿಕ, ಎಸ್.ಐ. ಪಟ್ಟೇದ, ಸುನಂದ ಪಿಳ್ಳೆ ಮತ್ತಿತರರು ಉಪಸ್ಥಿತರಿದ್ದರು. ಕೊನೆಯಲ್ಲಿ ವಚನಮಂಗಲ ನಡೆಯಿತು.

> ಪುಟ್ಟರಾಜ ಕವಿ ಗವಾಯಿಗಳು ಅಂಧ-ಅನಾಥರಿಗೆ ಆಶ್ರಯದಾತರಾಗಿ, ಸಾಹಿತ್ಯ-ಸಂಗೀತ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ಮಹಾತ್ಮರು. ಅವರ ಕೃತಿಗಳು ಮತ್ತು ಸೇವೆ ಸಮಾಜಕ್ಕೆ ಸದಾ ಪ್ರೇರಣೆಯಾಗಿವೆ.
>
> – ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka